# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 75 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 04–10–2024 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 02 Issue - 75 | RNI No: KARKAN/2023/88462 | Chitradurga | Date: 04-10-2024 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ದಕ್ಷತೆ, ಪ್ರಾಮಾಣಿಕ ಸೇವೆ ಸಲ್ಲಿಸುವ ಮೂಲಕ ಮಹಾತ್ಮರಿಗೆ ಗೌರವತನ್ನಿ: ಶಾಸಕ 2

ವಿದ್ಯಾರ್ಥಿ ಚೇತನ ಆಯುಷ್ ಸೇವಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ 3


ಚಳ್ಳಕೆರೆ ತಾಲ್ಲೂಕು ಕಚೇರಿ ಕಾಂಪೌಂಡ್‌ಗೆ ಅಂಟಿಕೊಂಡಿದ್ದ ಗೂಡಂಗಡಿ ತೆರವು 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಪಿಎಸ್‌ಐ ಪರೀಕ್ಷೆ ಸುಗಮ, 11 ಕೇಂದ್ರಗಳಿಂದ 3909 ಅಭ್ಯರ್ಥಿಗಳು ಹಾಜರು



» ದಾವಣಗೆರೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪಿಎಸ್‌ಐ ನೇಮಕಾತಿ ಪರೀಕ್ಷೆ ಅಕ್ಟೋಬರ್ 3 ರಂದು ನಡೆದಿದ್ದು ದಾವಣಗೆರೆ ನಗರದ 11 ಕೇಂದ್ರಗಳಲ್ಲಿ ನಡೆದ ಮೊದಲ ಹಾಗೂ ಎರಡನೇ ಪತ್ರಿಕೆ ಪರೀಕ್ಷೆಗೆ 3909 ಅಭ್ಯರ್ಥಿಗಳು ಹಾಜರಾಗಿದ್ದರು. ಒಟ್ಟು 11 ಕೇಂದ್ರಗಳಿಂದ 6464 ಅಭ್ಯರ್ಥಿಗಳು ನೊಂದಾಯಿಸಿದ್ದು ಇದರಲ್ಲಿ 2051 ಅಭ್ಯರ್ಥಿಗಳು ಗೈರು ಹಾಜರಾಗಿದ್ದರು. ಉಳಿದಂತೆ ಪರೀಕ್ಷೆ ಸುಗಮವಾಗಿ ನಡೆದಿರುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ.

### ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

» ಚಿತ್ರದುರ್ಗ

2021ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಣೆಗೊಂಡ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಮತ್ತು ಆಯ್ಕೆಯಾಗದ ಪುಸ್ತಕಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಯ್ಕೆಯಾದ ಪುಸ್ತಕಗಳ ತಾತ್ಕಾಲಿಕ ಪಟ್ಟಿಯನ್ನು ಜಿಲ್ಲಾ ನಗರ ಕೇಂದ್ರ ಗ್ರಂಥಾಲಯಗಳ ಕೇಂದ್ರ ಕಚೇರಿಗಳಲ್ಲಿ ಮತ್ತು ಇಲಾಖೆ ವೆಬ್‌ಸೈಟ್ dpl.karnataka.gov.in ನಲ್ಲಿ ಪ್ರಕಟಿಸಲಾಗಿದೆ. ಈ ಪುಸ್ತಕಗಳ ಪ್ರದರ್ಶನವನ್ನು ಅಕ್ಟೋಬರ್ 4 ಮತ್ತು 5 ರಂದು ಬೆಂಗಳೂರಿನ ಪಶ್ಚಿಮ ವಲಯ, ಹಂಪಿನಗರ ನಗರ ಕೇಂದ್ರ ಗ್ರಂಥಾಲಯದಲ್ಲಿ ಏರ್ಪಡಿಸಲಾಗುವುದು. ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಲೇಖಕರು, ಲೇಖಕ ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಮಾರಾಟಗಾರರು ಈ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ ಅ.9ರ ಸಂಜೆ 5.30ರ ಒಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ.ಬಿ.ಆರ್.ಅಂಬೇಡ್ಕರ್ ಬೀದಿ, ಬೆಂಗಳೂರು, ಇಲ್ಲಿಗೆ ಲಿಖಿತವಾಗಿ ಮನವಿಗಳನ್ನು ಸಲ್ಲಿಸಲು ಸೂಚಿಸಿದೆ. ನಂತರ ಬಂದಂತಹ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

### ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರ

» ಚಿತ್ರದುರ್ಗ

ಭಾರತೀಯ ವಿಜ್ಞಾನ ಸಂಸ್ಥೆ, ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ (ಎಸ್‌ಟಿಐ ಹಬ್) ಹಾಗೂ ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ (ಎಸ್‌ಐಡಿ), ಸಹಯೋಗದಲ್ಲಿ ಚಳ್ಳಕೆರೆ ತಾಲ್ಲೂಕಿನ ಕುದಾಪುರ ಭಾರತೀಯ ವಿಜ್ಞಾನ ಸಂಸ್ಥಾನ ಆವರಣದಲ್ಲಿ ನವೆಂಬರ್ 11 ರಿಂದ 9 ರವರೆಗೆ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರವನ್ನು ಆಯೋಜಿಸಲಾಗಿದೆ.6 ದಿನಗಳ ತರಬೇತಿಯಲ್ಲಿ ಹೊಸ ಉದ್ಯಮವನ್ನು ಆರಂಭಿಸಲು ಆಸಕ್ತಿ ಇರುವವರಿಗಾಗಿ ಉದ್ಯಮಶೀಲತೆ ಮತ್ತು ಕೌಶಲ್ಯಾಭಿವೃದ್ಧಿ ಕುರಿತು ತರಬೇತಿ ನೀಡಲಾಗುವುದು. 18–45 ವರ್ಷದೊಳಗಿನ ಕನಿಷ್ಠ ಎಸ್.ಎಸ್.ಎಲ್.ಸಿ ವಿದ್ಯಾರ್ಹತೆ ಹೊಂದಿರುವ ಆಸಕ್ತ ಅಭ್ಯರ್ಥಿಗಳು ಅ.20ರ ಒಳಗೆ ತಮ್ಮ ಹೆಸರನ್ನು ಗಣೇಶ್ ಮೊ. 8970582703, ಕೋಟೇಶ್ ಮೊ.9743675646 ಗೆ ಕರೆ ಮಾಡಿ ನೊಂದಾಯಿಸಿಕೊಳ್ಳಬಹುದು. ಅ.25ರೊಳಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಎಸ್.ಸಿ, ಎಸ್.ಟಿ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ 6 ದಿನಗಳ ತರಬೇತಿ ಕಾರ್ಯಗಾರದಲ್ಲಿ ಭಾಗವಹಿಸಬೇಕು. ಊಟ ಮತ್ತು ವಸತಿ ಸೌಲಭ್ಯದೊಂದಿಗೆ ಸಂಪೂರ್ಣ ಉಚಿತವಾಗಿ ತರಬೇತಿ ನೀಡಲಾಗುತ್ತಿದ್ದು ಇದರ ಸದಪಯೋಗ ಪಡೆದುಕೊಳ್ಳುವಂತೆ ವಿಜ್ಞಾನ ತಂತ್ರಜ್ಞಾನ ಮತ್ತು ನಾವಿನ್ಯತ ಕೇಂದ್ರ ವ್ಯವಸ್ಥಾಪಕ ಪ್ರತಾಪ್ ಮೂರ್ತಿ ತಿಳಿಸಿದ್ದಾರೆ.

### ಗೃಹ ಆಧಾರಿತ ಶಿಕ್ಷಣ ಪಡೆಯುವ ಮಕ್ಕಳ ಮನೆಗೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಭೇಟಿ

# ಮನೆಯಲ್ಲಿಯೇ ಫೀಜಿಯೋಥೆರಪಿ ನೀಡಿ

» ಚಿತ್ರದುರ್ಗ

ದೈಹಿಕ ನ್ಯೂನತೆ ಹಾಗೂ ಇತರೆ ಕಾರಣಗಳಿಂದ ಗೃಹ ಆಧಾರಿತ ಶಿಕ್ಷಣ ಪಡೆಯುತ್ತಿರುವ ವಿಶೇಷ ಮಕ್ಕಳಿಗೆ ಅವರ ಮನೆಯಲ್ಲೆ ಫೀಜಿಯೋಥೆರಪಿ ಚಿಕಿತ್ಸೆ ನೀಡುವಂತೆ ಜಿಲ್ಲಾ ಪಂಚಾಯಿತಿ ಸಿಇಓ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುವಾರ ನಗರದ ಹಲವು ಬಡಾವಣೆಗಳ ಗೃಹ ಆಧಾರಿತ ಶಿಕ್ಷಣ ಕೇಂದ್ರ ಹಾಗೂ ವಿಶೇಷ ಚೇತನ ಮಕ್ಕಳ ಮನೆಗಳಿಗೆ ಭೇಟಿ ನೀಡಿದ ಜಿ.ಪಂ ಸಿಇಓ ಎಸ್.ಜೆ.ಸೋಮಶೇಖರ್ ಪರಿಶೀಲನೆ ನಡೆಸಿ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಗೃಹಾಧಾರಿತ ಶಿಕ್ಷಣ ಎಂದರೆ ಶಾಲೆಗೆ ಹಾಜರಾಗಲು ಸಾಧ್ಯವಾಗದ ತೀವ್ರ ದೈಹಿಕ ನ್ಯೂನ್ಯತೆಯುಳ್ಳ ಮಕ್ಕಳಿಗೆ ಮನೆಯಲ್ಲಿಯೇ ತಮಗೆ ಅವಶ್ಯಕತೆಯಿರುವ ದೈನಂದಿನ ಕೌಶಲ್ಯಗಳ ತರಬೇತಿ ಹಾಗೂ ಫೀಜಿಯೋಥೆರಪಿ ಸೇವೆಯನ್ನು ಒದಗಿಸಿ ಸಮಾಜದ ಮುಖ್ಯವಾಹಿನಿಗೆ ತರುವುದಾಗಿದೆ. ಇಂತಹ ಮಕ್ಕಳಿಗೆ ಆಧಾರ್ ಹಾಗೂ ಯು.ಡಿ.ಐ.ಡಿ ಕಾರ್ಡ್ ನೀಡಬೇಕು. ಮಾಸಾಶನಕ್ಕೆ ಅರ್ಹರಿರುವರಗೆ ಮಾಸಾಶನ ಸೌಲಭ್ಯ ಒದಗಿಸುವುದರೊಂದಿಗೆ ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನ, ಆರೋಗ್ಯ ಇಲಾಖೆಗಳು ತಿಂಗಳಲ್ಲಿ ಒಂದು ದಿನಾಂಕವನ್ನು ನಿಗಧಿಪಡಿಸಿ ಗೃಹಾಧಾರಿತ






ಶಿಕ್ಷಣ ಕೇಂದ್ರಗಳ ಮಕ್ಕಳಿಗೆ ದೊರೆಯುವ ಎಲ್ಲಾ ಸೌಲಭ್ಯವನ್ನು ಒದಗಿಸುವಂತೆ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನಲ್ಲಿ ಒಟ್ಟು 34 ಮಕ್ಕಳು ಗೃಹಾಧಾರಿತ ಶಿಕ್ಷಣ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಇಲ್ಲಿ ಮಕ್ಕಳ ಬೆಳವಣಿಗೆ ಹಾಗೂ ಆರೋಗ್ಯ ಕುರಿತಾದ ಸಂಪೂರ್ಣ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಶಿಕ್ಷಣ ಇಲಾಖೆ ಸಮನ್ವಯದೊಂದಿಗೆ ಶೈಕ್ಷಣಿಕ ಸಂಪನ್ಮೂಲ ವ್ಯಕ್ತಿ ಹಾಗೂ ಎಪಿಡಿ ಸಂಸ್ಥೆಯ ಸದಸ್ಯರು ಹಾಗೂ ಯು.ಆರ್. ಡಬ್ಲ್ಯೂ ಅವರು ಮನೆ ಮನೆಗೆ ಭೇಟಿ ನೀಡಿ ಮಕ್ಕಳನ್ನು ಗುರುತಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಈ ವೇಳೆ ಸೆರೆಬರಲ್ ಪಾಲಿಸಿ ನ್ಯೂನ್ಯತೆಯಿಂದ ಬಳಲುತ್ತಿರುವ ಮಗುವಿನ ಮನೆಗೆ ಭೇಟಿ ನೀಡಿದ ಜಿ.ಪಂ.ಸಿಇಓ ಎಸ್.ಜೆ.ಸೋಮಶೇಖರ್, ತಕ್ಷಣ ಮಗುವಿನ ರೋಗ ವಿಧಾನವನು ಪರೀಕ್ಷಿಸಿ ಜಿಲ್ಲಾ ಆಸ್ಪತ್ರೆಯಲ್ಲಿ ಅಗತ್ಯ ಚಿಕಿತ್ಸೆ ನೀಡುವಂತೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ ಅವರಿಗೆ ಸೂಚಿಸಿದರು. ನಂತರ ತಂದೆ ತಾಯಿಯರಿಂದ ದೂರವಿದ್ದು, ಅಜ್ಜಿಯ ಆಶ್ರಯದಲ್ಲಿ ಬೆಳುತ್ತಿರುವ ಮಗುವಿಗೆ ಇಲಾಖೆ ಹಾಗೂ ಸರ್ಕಾರದಿಂದ ಸಿಗುವ ಎಲ್ಲಾ ಸೌಲಭ್ಯಗಳನ್ನು ಒದಗಿಸುವಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಉಪನಿರ್ದೇಶಕಿ ಭಾರತಿ ಬಣಕಾರ್ ಅವರಿಗೆ ಹೇಳಿದರು.ನ್ಯೂನತೆಯಿಂದ ಬಳುತ್ತಿರುವ ಒಂದೇ ಕುಟುಂಬದ ಎರಡು ಮಕ್ಕಳ ಮನೆಗೆ ಭೇಟಿ ನೀಡಿದ ಸಿಇಓ ಇಬ್ಬರಲ್ಲಿ ಒಂದು ಮಗು ಗೃಹಾಧಾರಿತ ಶಿಕ್ಷಣವನ್ನು ಯಶಸ್ವಿಯಾಗಿ ಪಡೆದು ಔಪಚಾರಿಕ ಶಾಲಾ ಶಿಕ್ಷಣಕ್ಕೆ ತೆರಳುತ್ತಿರುವ ಸಂಗತಿ ತಿಳಿದು ಹರ್ಷ ವ್ಯಕ್ತಪಡಿಸಿದರು. ಬಿ.ಆರ್.ಸಿ ಕೇಂದ್ರದಲ್ಲಿ ಸ್ಥಾಪಿತವಾಗಿರುವ ಸಮನ್ವಯ ಶಿಕ್ಷಣ ಸಂಪನ್ಮೂಲ ಕೇಂದ್ರಕ್ಕೆ ಭೇಟಿ ನೀಡಿ. ವಿಶೇಷ ಅಗತ್ಯತೆಯುಳ್ಳ ಮಕ್ಕಳಿಗೆ ಕೇಂದ್ರದಲ್ಲಿ ಕಲ್ಪಿಸಲಾದ ಸೌಲಭ್ಯಗಳನ್ನು ಸಮಗ್ರವಾಗಿ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಈ ವೇಳೆ ಮಕ್ಕಳ ಪೋಷಕರೊಂದಿಗೆ ಸಂವಾದ ನಡೆಸಿದರು.ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ. ಜಿಲ್ಲಾ ಆರೋಗ್ಯ ಮತ್ತು ಕಲ್ಯಾಣಾಧಿಕಾರಿಗಳಾದ ಡಾ. ಜಿ.ಪಿ ರೇಣುಪ್ರಸಾದ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮಂಜುನಾಥ, ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್ ಉಪಸ್ಥಿತರಿದ್ದರು.

# ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಯೋಜನೆ: ಶೇ.100 ರಷ್ಟು ಪ್ರಗತಿ ಸಾಧಿಸಲು ಸೂಚನೆ

» ದಾವಣಗೆರೆ

ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಯೋಜನೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೊಕೇಶ್ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು ಅವರು (ಅ.3) ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಆಯೋಜಿಸಲಾಗಿದ್ದ. ಪರಿಶಿಷ್ಟ. ಜಾತಿ ಹಾಗೂ ಬುಡಕಟ್ಟು ಉಪಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟು ಯೋಜನೆಯಲ್ಲಿ ಬರುವ



ವಿವಿಧ ಇಲಾಖೆಗಳು ಯಾವುದೇ ಫಲಾನುಭವಿ ಆಯ್ಕೆಯಲ್ಲಿ ಹಾಗೂ ಟೆಂಡರ್ ಪ್ರಕ್ರಿಯೆಯಲ್ಲಿ ವಿಳಂಬ ಮಾಡದೆ ಕಾರ್ಯನಿರ್ವಹಿಸಬೇಕು ತಿಳಿಸಿದರು. ಪ್ರಸಕ್ತ ಸಾಲಿನ ವಿವಿಧ ಇಲಾಖೆಗಳು ವಿಶೇಷ ಘಟಕ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆಯಡಿಯಲ್ಲಿ ಎಸ್.ಸಿ.ಎಸ್.ಪಿ ಶೇ. 83.44 ಹಾಗೂ ಟಿ.ಎಸ್.ಪಿ ಶೇ.82.96 ರಷ್ಟು ಆಗಿದ್ದು. ಇದನ್ನು ಇನ್ನು ಹೆಚ್ಚಿನ ಮಟ್ಟದಲ್ಲಿ ಅನುಷ್ಠಾನ ಆಗಬೇಕು ಎಂದು ತಿಳಿಸಿದರು.

ಎಸ್.ಸಿ.ಪಿ.ಯಡಿ 240.88 ಕೋಟಿ ಹಂಚಿಕೆಯಾಗಿ 89.98 ಕೋಟಿ ಬಿಡುಗಡೆ ಮಾಡಲಾಗಿದೆ, ಇದರಲ್ಲಿ 74.56 ವೆಚ್ಚ ಮಾಡಲಾಗಿದೆ. ಟಿಎಸ್‌ಪಿಯಡಿ 108.10 ಕೋಟಿ ಹಂಚಿಕೆಯಾಗಿದ್ದು 53.68 ಕೋಟಿ ಬಿಡುಗಡೆಯಾಗಿದ್ದು 44.10 ಕೋಟಿ ವೆಚ್ಚ ಮಾಡಲಾಗಿದೆ. ಈ ವರ್ಷದ ಅಂತ್ಯಕ್ಕೆ ಶೇ 100 ರಷ್ಟು ಸಾಧನೆಯನ್ನು ಎಲ್ಲಾ ಇಲಾಖೆಗಳು ಮಾಡಲು ತಿಳಿಸಿದರು.

## ಅಡಿಕೆ, ಬಾಳೆ ನಾಶಪಡಿಸಿದ ಕಿಡಿಗೇಡಿಗಳು: ಪೋಲೀಸರಿಗೆ ದೂರು



**ಚಳ್ಳಕೆರೆ:** ತಾಲ್ಲೂಕಿನ ತಳಕು ಹೋಬಳಿಯ ಪರಶುರಾಮಪುರ ಠಾಣಾ ವ್ಯಾಪ್ತಿಯ ಸಿರಿವಾಳ ಓಬಳಾಪುರದ ಗ್ರಾಮಕ್ಕೆ ಹೊಂದಿಕೊಂಡಿರುವ ಕೋಡಿಹಟ್ಟಿಯ ಜಿ.ಎಂ.ಚಂದ್ರಪ್ಪ ಎಂಬುವವರಿಗೆ ಸೇರಿದ ಜಮೀನು ರಿ.ಸರ್ವೆ, ನಂ 89/1, 89/2ರ ಒಟ್ಟು 7 ಎಕರೆ ಪ್ರದೇಶದಲ್ಲಿ 3 ಸಾವಿರ ಬಾಳೆ, 5600 ಅಡಿಕೆ ಗಿಡ ಬೆಳೆದಿದ್ದು ಸುಮಾರು ಸುಮಾರು ಐದು ವರ್ಷಗಳಿಂದ ಅಡಿಕೆ ಬೆಳೆಯನ್ನು ಚಂದ್ರಪ್ಪ ಮತ್ತು ಕುಟುಂಬ ಸಂರಕ್ಷಣೆ ಮಾಡಿದ್ದು, ಬುಧವಾರ ರಾತ್ರಿ ಯಾರೋ ಕಿಡಿಗೇಡಿಗಳು ತೋಟಕ್ಕೆ ನುಗ್ಗಿ ನೀರು ಹಾಯಿಸುವ ಪೈಪ್, ಅಡಿಕೆ ಮತ್ತು ಬಾಳೆ ಗಿಡಗಳನ್ನು ಕಡಿದು ಹಾಕಿದ್ದಾರೆ.


ಪುಟ 3


## ಪ್ರಮುಖ ಸುದ್ದಿ

# ವಾಲ್ಮೀಕಿ ಜಯಂತಿ ಯಶಸ್ವಿಗೆ ಎಲ್ಲರ ಸಹಕಾರ ಮುಖ್ಯ

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಮಹರ್ಷಿ ಶ್ರೀವಾಲ್ಮೀಕಿ ಜಯಂತಿಯನ್ನು ಭಕ್ತಿ, ಶ್ರದ್ದೆಯಿಂದ ಆಚರಿಸಬೇಕು. ವಾಲ್ಮೀಕಿಯವರು ನಾಡಿಗೆ ಸಲ್ಲಿಸಿದ ಸೇವೆಯನ್ನು ನಿರಂತರ ಸ್ಮರಿಸಬೇಕು, ಮಹರ್ಷಿವಾಲ್ಮೀಕಿಜಯಂತಿಆಚರಣೆಯಲ್ಲಿ ಯಾವುದೇ ಲೋಪವಾಗದಂತೆ ತಾಲ್ಲೂಕು ಆಡಳಿತ ಎಚ್ಚರಿಕೆ ವಹಿಸಬೇಕು, ಮಾನವ ಕಲ್ಯಾಣಕ್ಕಾಗಿ ವಾಲ್ಮೀಕಿ ನೀಡಿದ ಕೊಡುಗೆ ಅಪಾರವಾದ್ದದ್ದು ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಗುರುವಾರ ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಹರ್ಷಿ ಶ್ರೀವಾಲ್ಮೀಕಿ ಜಯಂತಿ ಆಚರಣೆ ಹಿನ್ನೆಲೆ ಕರೆಯಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ ಹಾಗೂ ನಾಯಕ ಸಮಾಜದ ವಿವಿಧ ಸಂಘಟನೆಗಳ ಆಶ್ರಯದಲ್ಲಿ ಈ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಪ್ರಾರಂಭದಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ಶಿವರಾಜ್ ಮಾತನಾಡಿ, ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆಯಿಂದ ಮತ್ತೊಮ್ಮೆ ಅವರು ಈ




ನಾಡಿಗೆ ನೀಡಿದ ಕೊಡುಗೆ ಸ್ಮರಿಸುವ ಅವಕಾಶವನ್ನು ಸರ್ಕಾರ ಮಾಡಿಕೊಟ್ಟಿದೆ. ಸಮಾಜದ ಎಲ್ಲಾ ವರ್ಗಗಳಲ್ಲಿ ಸಾಮರಸ್ಯ ಉಂಟು ಮಾಡಲು ವಾಲ್ಮೀಕಿಯವರು ಹೆಚ್ಚು ಒತ್ತು ನೀಡಿದ್ದರು ಎಂದರು.

ವಾಲ್ಮೀಕಿ ಜಯಂತಿ ಅ.17ರ ಗುರುವಾರ ನಡೆಯಲಿದ್ದು, ಅಂದು ಬೆಳಗ್ಗೆ 10.30ಕ್ಕೆ ನಗರದ ವಾಲ್ಮೀಕಿ ವೃತ್ತದಿಂದ ಬೃಹತ್ ಮೆರವಣಿಗೆ ಆರಂಭವಾಗಲಿದೆ. ಅಂಬೇಡ್ಕರ್ ವೃತ್ತ, ನೆಹರು ವೃತ್ತದ ಮೂಲಕ ವಾಲ್ಮೀಕಿ ಕಲ್ಯಾಣಮಂಟಪಕ್ಕೆ ತೆರಳಿದೆ. ಅಲ್ಲಿ ಮಧ್ಯಾಹ್ನ 2ಕ್ಕೆ ಶ್ರೀವಾಲ್ಮೀಕಿ ಜಯಂತಿ ಆಚರಣೆ ಜೊತೆಗೆ ಸಮುದಾಯದ ವಿವಿಧ ಕ್ಷೇತ್ರಗಳ ಗಣ್ಯರು, ಪ್ರತಿಭಾಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಎಂದು ಶಾಸಕರು ತಿಳಿಸಿದರು. ಸಮುದಾಯದ ಆಶಾಕಿರಣವಾಗಿ ಮಹರ್ಷಿ ವಾಲ್ಮೀಕಿ ಹೊರಹೊಮ್ಮಿದ್ಧಾರೆ, ವಾಲ್ಮೀಕಿ ಜಯಂತಿ ಆಚರಣೆಸಂದರ್ಭದಲ್ಲಿಮೆರವಣಿಗೆಹಾಗೂ ಸಾರ್ವಜನಿಕ ಸಭಾ ಕಾರ್ಯಕ್ರಮಗಳಲ್ಲಿ ವಾಲ್ಮೀಕಿಯವರ ಬದುಕನ್ನು ಆಧರಿಸಿ ವಿಶೇಷ ಉಪನ್ಯಾಸ ಮಾಲಿಕೆಯನ್ನು ಹಮ್ಮಿಕೊಳ್ಳಲಾಗಿದೆ. ಎಲ್ಲರೂ ಸೇರಿ ಅರ್ಥಪೂರ್ಣ, ಸುಂದರವಾಗಿ ಈ ಕಾರ್ಯಕ್ರಮ ಆಚರಿಸೋಣವೆಂದರು.

ಪ್ರತಿವರ್ಷದಂತೆ ಈ ವರ್ಷವೂ ಮೆರವಣಿಗೆಯಲ್ಲಿ ಕಲಾತಂಡಗಳ ಜೊತೆಗೆ ಡಿಜೆ ಸೌಲಭ್ಯ ನೀಡಬೇಕೆಂದು ಯುವಕರು ಒತ್ತಾಯಿಸಿದ್ದು, ಕೂಡಲೇ ಡಿವೈಎಸ್ಪಿಗೆ ಸೂಚನೆ ನೀಡಿದ ಶಾಸಕರು ಕಡೆಯ ಪಕ್ಷ ಎರಡು ಡಿಜೆಗೆ ಅನುಮತಿ ನೀಡುವಂತೆ ಮನವಿ ಮಾಡಿದರು. ಮೆರವಣಿಗೆಗೆ ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಿಬ್ಬಂದಿ ವರ್ಗದ ಜೊತೆಗೆ ತಾಲ್ಲೂಕು ಮಟ್ಟದ ಸಂಘ ಸಂಸ್ಥೆಯ ಪ್ರತಿನಿಧಿಗಳು,. ಸಮುದಾಯದ ಎಲ್ಲಾ ವಿಭಾಗದ ಕಾರ್ಯಕರ್ತರು ತಪ್ಪದೆ ಹಾಜರಾಗಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸೋಣವೆಂದರು. ಪೂರ್ವಭಾವಿ ಸಭೆಯಲ್ಲಿ ತಹಶೀಲ್ದಾರ್ ರೇಹಾನ್‌ಪಾಷ, ಗ್ಯಾರಂಟಿ ಸಮಿತಿ ತಾಲ್ಲೂಕು ಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ, ನಗಸರಭಾ ಸದಸ್ಯರಾದ ರಮೇಶ್‌ಗೌಡ, ಹೊಯ್ಸಳಗೋವಿಂದ, ನಾಮಿನಿ ಸದಸ್ಯರಾದ ಬಡಿಗಿಪಾಪಣ್ಣ, ವೀರಭದ್ರಪ್ಪ, ಪೌರಾಯುಕ್ತ ಜಗರೆಡ್ಡಿ, ಯುವ ಮುಖಂಡ ಕೆ.ಟಿ.ಕುಮಾರಸ್ವಾಮಿ, ರೈತ ಸಂಘದ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ತಾಲ್ಲೂಕು ಎಸ್ಟಿಮಹಿಳಾ ಘಟಕದ ಅಧ್ಯಕ್ಷೆ ಯಶೋಧಮ್ಮ, ವಾಲ್ಮೀಕಿ ಮಹಿಳಾ ಸಂಘದ ಜಿಲ್ಲಾಧ್ಯಕ್ಷೆ ಸೌಭಾಗ್ಯಮ್ಮ, ತಾಲ್ಲೂಕು ಕಾರ್ಯದರ್ಶಿ ಸೂರ್ಯಪ್ರಭಾ, ಡಾ.ನಾಗೇಂದ್ರನಾಯ್ಕ, ಕಾರ್ಯದರ್ಶಿ ದುಗ್ಗಾವರ ಪಾಲಯ್ಯ, ಗಾಡಿತಿಪ್ಪೇಸ್ವಾಮಿ, ರಘುವೀರನಾಯಕ, ಟಿ.ಜೆ.ತಿಪ್ಪೇಸ್ವಾಮಿ, ಡಾ.ಮಂಜುನಾಥ, ಶ್ರೀನಿವಾಸ್, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್‌ದೇಸಾಯಿ, ಪಿ.ತಿಪ್ಪೇಸ್ವಾಮಿ, ಜಯಲಕ್ಷ್ಮಿ, ಸುರೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ನಗರಸಭೆ: ಅ.5ರಂದು ಸಾಮಾನ್ಯ ಸಭೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ಸಾಮಾನ್ಯ ಸಭೆಯನ್ನು ಇದೇ ಅ.05ರಂದು ಬೆಳಿಗ್ಗೆ 11ಕ್ಕೆ ನಗರಸಭೆ ಕಚೇರಿಯಲ್ಲಿ ಆಯೋಜಿಸಲಾಗಿದೆ. ಚಿತ್ರದುರ್ಗ ನಗರಸಭೆ ಅಧ್ಯಕ್ಷೆ ಸುಮಿತ ಬಿ.ಎನ್. ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

### ವಿಶ್ವ ರೇಬಿಸ್ ದಿನಾಚರಣೆ: ಉಚಿತ ರೇಬೀಸ್ ನಿರೋಧಕ ಲಸಿಕೆ

» ಚಿತ್ರದುರ್ಗ

ಪಶುವೈದ್ಯಕೀಯ ಪಾಲಿಕ್ಲಿನಿಕ್ ವತಿಯಿಂದ ವಿಶ್ವ ರೇಬೀಸ್ ದಿನಾಚರಣೆ ಅಂಗವಾಗಿ 2024ರ ಸೆ.28 ರಿಂದ ಅ.28ರ ವರೆಗೆ ಉಚಿತ ರೇಬೀಸ್ ನಿರೋಧಕ ಲಸಿಕಾ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು ತಮ್ಮ ಸಾಕು ಪ್ರಾಣಿಗಳಾದ ನಾಯಿ, ಬೆಕ್ಕುಗಳಿಗೆ ನಗರದ ಪಶುವೈದ್ಯಕೀಯ ಪಾಲಿಕ್ಲಿನಿಕ್‌ನಲ್ಲಿ ಬೆಳಿಗೆ 9 ರಿಂದ ಮಧ್ಯಾಹ್ನ 1 ರವರೆಗೆ ಹಾಗೂ ಮದ್ಯಾಹ್ನ 2 ರಿಂದ 4 ಗಂಟೆಯವರೆಗೆ ಉಚಿತ ರೇಬೀಸ್ ನಿರೋಧಕ ಲಸಿಕೆ ಹಾಕಿಸಿಕೊಳ್ಳಲು ತಿಳಿಸಿದೆ. ಈ ಸೌಲಭ್ಯವು ಜಿಲ್ಲೆಯ ಎಲ್ಲಾ ಪಶು ಆಸ್ಪತ್ರೆಗಳಲ್ಲಿ ಲಭ್ಯವಿದೆ ಎಂದು ಪಶು ವೈದ್ಯಕೀಯ ಪಾಲಿಕ್ಲಿನಿಕ್ ನಿರ್ದೇಶಕ ಡಾ.ಎಸ್.ಎನ್.ಹರೀಶ್ ತಿಳಿಸಿದ್ದಾರೆ.

### ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಸ್ವ-ಸಹಾಯ ಗುಂಪು ಸದಸ್ಯರ ನೇಮಕ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ನಗರ ಸ್ಥಳೀಯ ಸಂಸ್ಥೆಯ ಜೊತೆಗೆ ಪೂರ್ಣಾವಧಿಗೆ ಐಇಸಿ ಚಟುವಟಿಕೆಗಳನ್ನು ಕೈಗೊಳ್ಳಲು ತಮ್ಮ ಆಸಕ್ತಿಯನ್ನು ವ್ಯಕ್ತಪಡಿಸಲು ಓಗಿಒಖ-ಜಚಿಥಿ ಅಡಿಯಲ್ಲಿ ನೊಂದಾಯಿತ ಖಊಉ ಸದಸ್ಯರಿಂದ ಆಸಕ್ತಿಯ ಅಭಿವ್ಯಕ್ತಿಯನ್ನು ಆಹ್ವಾನಿಸಲಾಗಿದೆ. ಆಯ್ಕೆ ಪ್ರಕ್ರಿಯೆ ಮತ್ತು ವೇತನಕ್ಕೆ ಸಂಬಂಧಿಸಿದ ವಿವರ www.holalkeretown.mrc.gov.in ನಲ್ಲಿ ವೀಕ್ಷಿಸಬಹುದು. NUML-day ನೊಂದಿಗೆ ನೊಂದಾಯಿಸಿಕೊಂಡ ಆಸಕ್ತ ಸದಸ್ಯರು ತಮ್ಮ ಆಸಕ್ತಿಯ ಅಭಿವ್ಯಕ್ತಿಯನ್ನು NUML-day ಯ ಹಿಂಬರಹದೊಂದಿಗೆ ಅಕ್ಟೋಬರ್ 5ರ ಸಂಜೆ 5 ಗಂಟೆಯೊಳಗೆ ಕಚೇರಿಯ ಅಧಿಕೃತ ಇಮೇಲ್ ka.holalakere.tmc@gmail.com ಗೆ ಕಳುಹಿಸಲು ತಿಳಿಸಲಾಗಿದೆ. ಆಸಕ್ತಿಯುಳ್ಳ SHG ಸದಸ್ಯರು ಗುರುತಿನ ಪುರಾವೆ, ವಿಳಾಸದ ಪುರಾವೆ, ಅರ್ಹಾತಾ ಪಟ್ಟಿಯಲ್ಲಿ ನೊಂದಾಯಿಸಕೊಂಡಿರುವುದಕ್ಕೆ (ಎಂಪಾನೆಲ್) ದಾಖಲೆಗಳು, ಶೈಕ್ಷಣಿಕ ಅರ್ಹತೆ, NUML-day ನಿಂದ ಹಿಂಬರಹ ನಮೂನೆಯ ದಾಖಲೆಗಳನ್ನು ಸಲ್ಲುಸಬೇಕು. ಆಯ್ಕೆಯಾದ ಅಭ್ಯರ್ಥಿಗಳನ್ನು ಈ ವಿಷಯದ ಕುರಿತು ಅವರ ತಿಳುವಳುಕೆಗಳನ್ನು ನಿರ್ಣಯಿಸಲು ಅ.7ರಂದು ಸಂದರ್ಶನಕ್ಕೆ ಕರೆಯಲಾಗುವುದು ಎಂದು ಹೊಳಲ್ಕೆರೆ ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅ.3 ರಿಂದ 10ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಸಮೀಕ್ಷೆ

» ಚಿತ್ರದುರ್ಗ

ರಾಜ್ಯ ಸರ್ಕಾರವು ಹೊಸದುರ್ಗ ಪುರಸಭಾ ವ್ಯಾಪ್ತಿಯಲ್ಲಿ ಇದೇ ಅ.3 ರಿಂದ 10 ರವರೆಗೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ನಡೆಸಲಿದೆ. ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯದಲ್ಲಿ ದೈಹಿಕವಾಗಿ ತೊಡಗಿರುವವರು ಅಂದರೆ, ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು, ಅನೈರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಿಸುವುದು ಹಾಗೂ ಶೌಚಾಲಯದ ಮಲಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವ ವ್ಯಕ್ತಿಗಳು ಇದ್ದಲ್ಲಿ, ಅ.03 ರಿಂದ 5ರವರೆಗೆ ಹೊಸದುರ್ಗ ಪುರಸಭೆ ವ್ಯಾಪ್ತಿಯ ವಾರ್ಡ್ ಸಂಖ್ಯೆ 18 ಬೋವಿಹಟ್ಟಿ ಅಂಗನವಾಡಿ ಕೇಂದ್ರ, ಅ.6 ರಿಂದ 8 ರವರೆಗೆ ವಾರ್ಡ್ ಸಂಖ್ಯೆ 13 ಎ.ಕೆ ಹಟ್ಟಿ ಸಮುದಾಯ ಭವನ ಹಾಗೂ ಅ.9 ರಿಂದ 10ರವರೆಗೆ ವಾರ್ಡ್ ಸಂಖ್ಯೆ 8 ಕಲ್ಲುಗುತ್ತಿ ಬಡಾವಣೆ ಸಮುದಾಯ ಭವನದಲ್ಲಿ ಬೆಳಿಗ್ಗೆ 7ಗಂಟೆಯಿಂದ ಸಂಜೆ 6ರ ವರೆಗೆ ಆಯೋಜಿಸಿರುವ ಸಮೀಕ್ಷೆ ಮತ್ತು ಗುರುತಿಸುವಿಕೆಯ ಶಿಬಿರದಲ್ಲಿ ಸ್ವಯಂ ಭಾಗವಹಿಸಿ ಹೆಸರನ್ನು ನೊಂದಾಯಿಸಿಕೊಳ್ಳಬಹುದು.

ನೊಂದಣಿ ಮಾಡಿಸಲು ಪಾಸ್‌ಪೋರ್ಟ್ ಅಳತೆಯ ಒಂದು ಭಾವಚಿತ್ರ, ಕುಟುಂಬ ಸದಸ್ಯರನ್ನೊಳಗೊಂಡ ಒಂದು ಭಾವಚಿತ್ರ (ಅಳತೆ 4*6), ಬ್ಯಾಂಕ್ ಖಾತೆಯ ಪಾಸ್‌ಬುಕ್‌ನ ಮುಖ ಪುಟದ ಪ್ರತಿ (ಮೂಲ ಪುಸ್ತಕವನ್ನು ಸಹ ತರುವುದು), ಆಧಾರ್ ಪ್ರತಿ (ಮೂಲ ಪ್ರತಿ ತರುವುದು), ಮ್ಯಾನ್ಯೂಯಲ್ ಸ್ಕ್ಯಾವೆಂಜಿಂಗ್ ಕಾರ್ಯನಿರ್ವಹಿಸುತ್ತಿರುವ ಅನೈರ್ಮಲ್ಯ ಶೌಚಾಲಯ ಸ್ಥಳದ ವಿವರದ ಸೂಕ್ತ ದಾಖಲೆಗಳೊಂದಿಗೆ ಹೆಸರು ನೊಂದಾಯಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಹಿರಿಯ ಆರೋಗ್ಯ ನಿರೀಕ್ಷಕರಾದ ಎಂ.ಬಸವರಾಜ್ ದೂರವಾಣಿ ಸಂಖ್ಯೆ 9740642719, ಟಿ.ಕಲ್ಪನ ದೂರವಾಣಿ ಸಂಖ್ಯೆ 7975549381 ಹಾಗೂ ಬಿಲ್‌ಕಲೆಕ್ಟರ್ ಎನ್.ವಿನಯ್ 9353833372 ಗೆ ಸಂಪರ್ಕಿಸಬಹುದು.

---

#### ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಗಾಂಧೀಜಿ, ಶಾಸ್ತ್ರಿಯವರ ಜನ್ಮದಿನಾಚರಣೆ

# ದಕ್ಷತೆ, ಪ್ರಾಮಾಣಿಕ ಸೇವೆ ಸಲ್ಲಿಸುವ ಮೂಲಕ ಮಹಾತ್ಮರಿಗೆ ಗೌರವತನ್ನಿ: ಶಾಸಕ ರಘುಮೂರ್ತಿ

» ಚಳ್ಳಕೆರೆ

ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡಲು ಮಹಾತ್ಮಗಾಂಧೀಜಿಯವರು ಸುಧೀರ್ಘಕಾಲ ಹೋರಾಟ ನಡೆಸಿದರು. ಗ್ರಾಮೀಣ ಪ್ರದೇಶದ ಅಭಿವೃದ್ದಿಯೇ ಅವರ ಗುರಿಯಾಗಿತ್ತು. ಪ್ರಸ್ತುತ ರಾಜ್ಯ ಸರ್ಕಾರ ಮಹಾತ್ಮಗಾಂಧೀಜಿಯವರ ಆದರ್ಶಪಾಲನೆಗೆ ಬದ್ದವಾಗಿದೆ. ಅಧಿಕಾರಿ ವರ್ಗ ಪ್ರಾಮಾಣಿಕ ಸೇವೆಯ ಮೂಲಕ ಗಾಂಧೀಜಿ ಸೇವೆಯನ್ನು ನಿತ್ಯ ಸ್ಮರಿಸಬೇಕೆಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.



ಅವರು, ಬುಧವಾರ ನಗರದ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ತಾಲ್ಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಮ್ಮಿಕೊಂಡಿದ್ದ ಮಹಾತ್ಮಗಾಂಧೀಜಿಯವರ 155ನೇ ಹಾಗೂ ಮಾಜಿ ಪ್ರಧಾನಿ ಲಾಲ್‌ಬಹದ್ದೂರ್‌ಶಾಸ್ತ್ರಿಯವರ 120ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಚಾಲನೆ ನೀಡಿ ಮಾತನಾಡಿದರು.

ಗಾಂಧೀಜಿಯವರ ಹೋರಾಟಗಳು ಸದಾಕಾಲ ಎಲ್ಲರಿಗೂ ಸ್ಪೂರ್ತಿಯಾಗಿವೆ, ವಿಧೇಶದಲ್ಲಿ ವಿದ್ಯಾಭ್ಯಾಸವನ್ನು ಅವಮಾನದ ಮೂಲಕ ಪಡೆದರೂ ಸಹ ದೇಶದ ಸ್ವಾತಂತ್ರ್ಯಕ್ಕಾಗಿ ಎಲ್ಲವನ್ನೂ ಮರೆತು ಹೋರಾಡಿದವರು. ಹಳ್ಳಿಯಿಂದ ದಿಲ್ಲಿತನಕ ಇಂದು ಗಾಂಧೀಜಿಯವರ ನಮನ ಕಾರ್ಯಕ್ರಮ ನಡೆಯುತ್ತಿದೆ. ಮಹಾತ್ಮಗಾಂಧೀಜಿ, ಲಾಲ್‌ಬಹದ್ದೂರ್‌ಶಾಸ್ತ್ರಿರವರು ದೇಶಕ್ಕೆ ನೀಡಿದ ಕೊಡುಗೆಯನ್ನು ಯಾರೂ ಮರೆಯಲು ಸಾಧ್ಯವಿಲ್ಲವೆಂದರು.

ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ತಹಶೀಲ್ದಾರ್ ರೇಹಾನ್‌ಪಾಷ, ಭಾರತೀಯರೆಲ್ಲರೂ ಹೆಮ್ಮೆಪಡಬೇಕಾದ ಸುದಿನ ಇದಾಗಿದೆ. ಮಹಾತ್ಮಗಾಂಧೀಜಿ ಮತ್ತು ಲಾಲ್‌ಬಹದ್ದೂರ್‌ಶಾಸ್ತ್ರಿರವರ ಜನ್ಮದಿನಾಚರಣೆ ಕಾರ್ಯಕ್ರಮ ಎಲ್ಲರಿಗೂ ಆತ್ಮವಿಶ್ವಾಸ ಹೆಚ್ಚಿಸುವ ದಿನವಾಗಲಿ. ನಮ್ಮ ನಾಡು, ನುಡಿಗೆ ಸೇವೆ ಸಲ್ಲಿಸಿದ ಮಹಾನೀಯರ ಕಾರ್ಯಕ್ರಮಗಳು ನಮಗೆ ವಿಶೇಷವಾದ ಶಕ್ತಿ ಹಾಗೂ ಸಂತಸ ತಂದುಕೊಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿ ಅಶೋಕ್, ಪಶು ವೈದ್ಯಾಧಿಕಾರಿ ರೇವಣ್ಣ, ತೋಟಗಾರಿಕೆ ಅಧಿಕಾರಿ ವಿರೂಪಾಕ್ಷಪ್ಪ, ಬಿಇಒ ಕೆ.ಎಸ್.ಸುರೇಶ್, ಎಸ್ಟಿ ಅಧಿಕಾರಿ ಶಿವರಾಜ್, ಬಿಸಿಎಂ ಅಧಿಕಾರಿ ರಮೇಶ್, ಸಮಾಜಕಲ್ಯಾಣಾಧಿಕಾರಿ ದೇವ್ಲಾನಾಯ್ಕ, ಡಿವೈಎಸ್ಪಿ ಬಿ.ಟಿ.ರಾಜಣ್ಣ, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಗ್ರಾಮ ಪಂಚಾಯಿತಿ ಅಧ್ಯಕ್ಷ ಆನಂದಕುಮಾರ್, ನಿವೃತ್ತಪ್ರಾಧ್ಯಾಪಕ ಶ್ರೀರಾಮರೆಡ್ಡಿ ಮುಂತಾದವರು ಭಾಗವಹಿಸಿದ್ದರು.

---

## ಜೆ.ಎನ್.ಕೋಟೆಯಲ್ಲಿ ಕಣ್ಣಿನ ಶಸ್ತ್ರಚಿಕಿತ್ಸೆ ಶಿಬಿರ

» ಚಿತ್ರದುರ್ಗ

ಚಿತ್ರದುರ್ಗ ತಾಲೂಕಿನ ಜೆ.ಎನ್.ಕೋಟೆ ಗ್ರಾಮ ಪಂಚಾಯಿತಿ ಆವರಣದಲ್ಲಿ ಗುರುವಾರ ಬೃಹತ್ ಉಚಿತ ನೇತ್ರ ತಪಾಸಣೆ ಶಸ್ತಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ನಡೆಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಅಂದತ್ವ ನಿವಾರಣ ವಿಭಾಗ, ತಾಲ್ಲೂಕು ಆರೋಗ್ಯ ಅಧಿಕಾರಿಗಳ ಕಚೇರಿ, ಶಂಕರ ಕಣ್ಣಿನ ಆಸ್ಪತ್ರೆ, ಜೆ.ಎನ್.ಕೋಟೆ ಗ್ರಾಮ ಪಂಚಾಯಿತಿ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಶಿಬಿರಕ್ಕೆ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣು ಪ್ರಸಾದ್ ಚಾಲನೆ ನೀಡಿದು.



ನಂತರ ಮಾತನಾಡಿದ ಡಿಹೆಚ್‌ಓ ಡಾ.ರೇಣು ಪ್ರಸಾದ್, ಕಣ್ಣುಗಳು ನಮ್ಮ ಆತ್ಮದ ಕಿಟಕಿಗಳಿದ್ದಂತೆ ಅದರ ರಕ್ಷಣೆ ಅಮೂಲ್ಯವಾದದ್ದು. ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಣ್ಣುಗಳ ಆರೋಗ್ಯ ಕಾಪಾಡಿಕೊಳ್ಳಿ ಎಂದು ಹೇಳಿದರು.

ನೇತ್ರ ತಪಾಸಣೆ ಚಿಕಿತ್ಸಾ ಶಿಬಿರವು ಕೇವಲ ಈ ಒಂದು ದಿನಕ್ಕೆ ಮಾತ್ರ ಸೀಮಿತವಾಗಿರದೆ ಪ್ರತಿ ತಿಂಗಳು ಆಯ್ದ ಗ್ರಾಮಗಳಲ್ಲಿ ಶಿಬಿರ ನಡೆಸಲಾಗುವುದು. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ರವೀಂದ್ರ ಮಾತನಾಡಿ, ಪಂಚೇಂದ್ರಿಯಗಳಲ್ಲಿ ಪ್ರಧಾನವಾದ ಇಂದ್ರಿಯ ಕಣ್ಣು. ಕಣ್ಣುಗಳನ್ನು ದಾನ ಮಾಡುವವರು ಮುಂದೆ ಬನ್ನಿ ಅಂದತ್ವ ನಿವಾರಣೆಗಾಗಿ ಎಲ್ಲರೂ ಕೈ ಜೋಡಿಸಿ ಎಂದು ತಿಳಿಸಿದ ಅವರು ಜಿಲ್ಲಾ ಆಸ್ಪತ್ರೆಯಲ್ಲಿ ಈ ವರ್ಷ 1200 ಕಣ್ಣಿನ ಪೊರೆ ಶಸ್ತತ್ರ ಚಿಕಿತ್ಸೆ ನಡೆಸಿ ಉಚಿತವಾಗಿ ಕನ್ನಡಕಗಳನ್ನು ವಿವರಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ. ಡಾ.ಜಿ.ಓ.ನಾಗರಾಜ್ ಅವರು ಜಿಲ್ಲೆಯಲ್ಲಿ ಅಂಧತ್ವ ನಿಯಂತ್ರಣ ಕಾರ್ಯಕ್ರಮಕ್ಕೆ ತೆಗೆದುಕೊಂಡು ಯೋಜನೆ ಅನುಷ್ಠಾನದ ಬಗ್ಗೆ, ಆಶಾಕಿರಣ ಕಾರ್ಯಕ್ರಮದ ಬಗ್ಗೆ ತಿಳಿಸಿದರು.

ಶಿಬಿರದಲ್ಲಿ 219 ಜನರ ತಪಾಸಣೆ ನಡೆಸಲಾಯಿತು. ಕಣ್ಣಿನ ಪೊರೆ ಶಸ್ತ ಚಿಕಿತ್ಸೆಗೆ 52 ಅರ್ಹ ಫಲಾನುಭವಿಗಳು ಆಯ್ಕೆಯಾದರು.

ಕಾರ್ಯಕ್ರಮದಲ್ಲಿ ಕೆ.ಡಿ.ಪಿ ಸದಸ್ಯ ಕೆ.ಸಿ.ನಾಗರಾಜ್, ವಾಣಿಜ್ಯೋದ್ಯಮಿ ಬಾಬಣ್ಣ, ಗ್ರಾಮ ಪಂಚಾಯಿತಿ ಅಧ್ಯಕ್ಷ ಮಲ್ಲೇಶಪ್ಪ, ಉಪಾಧ್ಯಕ್ಷೆ ನಾಗಮ್ಮ, ಪಿ.ಡಿ.ಓ. ಮಂಜುಳ, ಶಂಕರ್ ಶಸ್ತತ್ರೆ ಡಾ.ರವಿಕಿರಣ್, ಜಿಲ್ಲಾ ಆಯುಷ್ ಅಧಿಕಾರಿ ಚಂದ್ರಕಾಂತ ನಾಗಸಮುದ್ರ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ನೇತ್ರಾಧಿಕಾರಿ ರಾಮು, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎನ್.ಎಸ್.ಮಂಜುನಾಥ, ಬಿ.ಜಾನಕಿ ಸೇರಿದಂತೆ ಮತ್ತಿತರರು ಇದ್ದರು.

---

## ಸರ್ಕಾರದ ಆಡಳಿತದಲ್ಲಿ ಗಾಂಧಿ ತತ್ವಪಾಲನೆಗೆ ತಿಲಾಂಜಲಿ



» ಚಳ್ಳಕೆರೆ

ನಾಡಿನ ಬಡಜನರಿಗೆ ಸರ್ಕಾರಿ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ಸಲ್ಲಿಸುವುದಲ್ಲದೆ, ಭಷ್ಟಾಚಾರ ರಹಿತ ಆಡಳಿತವನ್ನು ನೀಡಬೇಕೆಂಬ ಮಹಾತ್ಮಗಾಂಧೀಜಿಯವರ ಕನಸು ಇನ್ನೂ ನನಸಾಗಿಲ್ಲ. ಗಾಂಧೀಜಿಯವರ ತತ್ವಪಾಲನೆಯನ್ನು ಸರ್ಕಾರ ಗಂಭೀರವಾಗಿ ಪರಿಗಣಸದೇ ಇರುವುದು ಗಾಂಧೀಜಿಯವರಿಗೆ ಮಾಡಿದ ಅಪಮಾನವೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ(ಪ್ರೊ.ಬಣ) ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ತಿಳಿಸಿದರು. ಅವರು, ನಗರದ ಪ್ರವಾಸಿಮಂದಿರದಲ್ಲಿ ಮಹಾತ್ಮಗಾಂಧೀಜಿ ಮತ್ತು ಲಾಲ್‌ಬಹದ್ದೂರ್‌ಶಾಸ್ತ್ರಿಯವರ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರಸ್ತುತ ಸರ್ಕಾರದ ಆಡಳಿತದಿಂದ ರೈತರಿಗೆ ಯಾವುದೇ ನೆಮ್ಮದಿಯಿಲ್ಲ, ರೈತರ ಪರಿಹಾರದ ಹಣವನ್ನೇ ನುಂಗಿಹಾಕಿದ ಸರ್ಕಾರವಿದು, ಇಂತಹ ಆಡಳಿತದಿಂದ ರೈತರ ಕಲ್ಯಾಣ ಅಸಾಧ್ಯ ಎಂದರು.


---

## ತಳಕು ಪಶುವೈದ್ಯ ಕೇಂದ್ರ ಅಧಿಕಾರಿ ಕೆ.ವೀರಪ್ಪ ನಿವೃತ್ತಿ

» ಚಳ್ಳಕೆರೆ

ಪಶುವೈದ್ಯ ಇಲಾಖೆಯಲ್ಲಿ 32 ವರ್ಷಗಳ ಕಾಲ ಉತ್ತಮ ಸೇವೆ ಸಲ್ಲಿಸಿದ ನೂರಾರು ಮೂಕಪ್ರಾಣಿಗಳಿಗೆ ಸಕರಾತ್ಮಕ ಚಿಕಿತ್ಸೆ ನೀಡಿ ಅವುಗಳ ಪ್ರಾಣ ರಕ್ಷಿಸಿ, ಅದೇ ರೀತಿ ಇಲಾಖೆಯ ಯಾವುದೇ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮಾಡುತ್ತಾ ಬಂದಿರುವ ತಳಕು ಪಶು ವೈದ್ಯ ಆಸ್ಪತ್ರೆಯ ಜಾನುವಾರು ಅಧಿಕಾರಿ ಕೆ.ವೀರಪ್ಪನವರ ಸೇವೆ ಶ್ಲಾಘನೀಯ ಎಂದು ಹಿರಿಯ ಪಶುವೈದ್ಯಾಧಿಕಾರಿ ಡಾ.ಎನ್.ವಿಜಯಕುಮಾರ್ ತಿಳಿಸಿದರು. ಅವರು, ತಳಕು ಗ್ರಾಮದ ಪಶುವೈದ್ಯ ಇಲಾಖೆಯಲ್ಲಿ ವಯೋನಿವೃತ್ತಿಹೊಂದಿದ ಕೆ.ವೀರಪ್ಪನವರನ್ನು ಸನ್ಮಾನಿಸಿ ಮಾತನಾಡಿದರು. ಪಶುವೈದ್ಯ ಇಲಾಖೆಯಲ್ಲಿ ಅವರು ಸಲ್ಲಿಸಿದ ಸೇವೆಗೆ ವಿಶೇಷ ಮನ್ನಣೆದೊರಕಿತ್ತು. ಗ್ರಾಮೀಣ ಭಾಗದಲ್ಲಿ ಅವರು ಹೆಚ್ಚು ಸೇವೆ ನೀಡುತ್ತಾ ಬಂದಿದ್ದರು. ಮೂಕಪ್ರಾಣಿಗಳ ಹಲವಾರು ರೋಗಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದರು. ಅವರ ನಿವೃತ್ತಿ ಜೀವನ ಸುಖಕರವಾಗಿರಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನಿರ್ಗಮನ ಜಾನುವಾರು ಅಧಿಕಾರಿ ಕೆ.ವೀರಪ್ಪ, 32 ವರ್ಷಗಳ ಕಾಲ ಇಲಾಖೆಯಲ್ಲಿ ಸೇವೆ ಸಲ್ಲಿಸಿದ್ದೇನೆ. ಯಾವುದೇ ಹಂತದಲ್ಲೂ ನಾನು ಕರ್ತವ್ಯದಿಂದ ವಂಚಿತನಾಗದಂತೆ ಜಾಗ್ರತೆ ವಹಿಸಿದ್ದೇನೆ. ಹಿರಿಯ ಅಧಿಕಾರಿಗಳ ಮಾರ್ಗದರ್ಶನ ಪಾಲಿಸಿದ್ದೇನೆ, ಗ್ರಾಮೀಣ ಭಾಗದ ರೈತರ ಜಾನುವಾರುಗಳಿಗೆ ಸಕಾಲಿಕ ಚಿಕಿತ್ಸೆ ನೀಡಿ ಪ್ರಾಣಾಪಾಯದಿಂದ ಪಾರು ಮಾಡಿದ್ದೇನೆ. ಜನರು ವಿಶ್ವಾಸಪಡುವಂತಹ ಸೇವೆಯನ್ನು ಮಾಡಿರುವುದು ಸಂತಸ ತಂದಿದೆ ಎಂದರು. ಕಾರ್ಯಕ್ರಮದಲ್ಲಿ ಪಿ.ಜಯಣ್ಣ, ಶಾಂತಮ್ಮ, ಚಂದ್ರಶೇಖರ್, ದುರುಗೇಶ್, ನಾಗೇಶ್, ಗ್ರಾಮ ಮುಖಂಡರಾದ ಕೃಷ್ಣಮೂರ್ತಿ, ಮಲ್ಲೇಶ್, ಜಯರಾಮ್ ಮುಂತಾದವರು ಉಪಸ್ಥಿತರಿದ್ದರು.



---

**ಪ್ರಮುಖ ಸುದ್ದಿ**

#### ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಹೆಚ್.ಬಿಲ್ಲಪ್ಪ ಅಭಿಮತ

# ಗಾಂಧೀಜಿ ಆಶಯದ ಮದ್ಯಮುಕ್ತ ರಾಷ್ಟ್ರ ನಿರ್ಮಾಣಕ್ಕೆ ಶ್ರಮಿಸೋಣ

» ಹೊಸದುರ್ಗ

ತಂದೆ-ತಾಯಿಗಳನ್ನು ಅಪಾರವಾಗಿ ಪ್ರೀತಿಸುತ್ತಿದ್ದ ಶ್ರವಣ ಕುಮಾರನ ಆದರ್ಶ, ರಾಜನಾಗಿದ್ದರೂ ಸತ್ಯ ಹರಿಶ್ಚಂದ್ರ ಸತ್ಯಕ್ಕಾಗಿ ಸ್ಮಶನ ಕಾದ. ಅಂತಹ ಮಹಾನ್ ಪುರುಷರ ಆದರ್ಶ ಗುಣಗಳು ಗಾಂಧೀಜಿಯವರ ಮೇಲೆ ಪ್ರಭಾವ ಬೀರಿವೆ. ಮಹಾತ್ಮರಾಗಲು ನಾನು ಬಯಸಿದರೆ, ಸತ್ಯ ಹರಿಶ್ಚಂದ್ರನ ರೀತಿ ಬದುಕಬೇಕು. ಶ್ರವಣ ಕುಮಾರನ ಆದರ್ಶ ಗುಣಗಳನ್ನು ನನ್ನಲ್ಲಿ ಮೈಗೂಡಿಸಿಕೊಳ್ಳಬೇಕು. ಬ್ರಿಟಿಷರನ್ನು ಹತ್ತಿಕ್ಕಲು ಗಾಂಧೀಜಿಯವರು ಅನುಸರಿಸಿದ ಸತ್ಯಾಗ್ರಹ, ಅಹಿಂಸಾ ಮಾರ್ಗ ದೇಶದ ಸ್ವತಂತ್ರಕ್ಕೆ ಬುನಾದಿಯಾಯಿತು. ಗಾಂಧೀಜಿಯ ಮದ್ಯಮುಕ್ತ ಭಾರತ ನಿರ್ಮಾಣದ ಆಶಯವನ್ನು ಈಡೇರಿಸಲು ಶ್ರಮಿಸೋಣ ಎಂದು ಹೈಕೋರ್ಟ್ ವಿಶ್ರಾಂತ ನಿವೃತ್ತ ನ್ಯಾಯಮೂರ್ತಿ ಹೆಚ್. ಬಿಲ್ಲಪ್ಪ ಅಭಿಮತ ವ್ಯಕ್ತಪಡಿಸಿದರು. ಪಟ್ಟಣದ ರಾಧಾಕೃಷ್ಣ ಕಲ್ಯಾಣ ಮಂಟಪದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ವತಿಯಿಂದ ಬುಧವಾರ ನಡೆದ ಗಾಂಧೀಜಿ




ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮಲ್ಲಿರುವ ಸಂಪತ್ತಿನ ಮೇಲೆ ಉಪ್ಪಿನ ತೆರಿಗೆ ಏರಿದ ಬ್ರಿಟಿಷರ ವಿರುದ್ಧ ದಂಡಿ ಸತ್ಯಾಗ್ರಹ ನಡೆಸಿದ ಗಾಂಧೀಜಿಯವರ ಅಹಿಂಸಾ ಮಾರ್ಗ, ಉಪ್ಪಿನ ಸತ್ಯಾಗ್ರಹ ಬ್ರಿಟಿಷ್ ಸಾಮ್ರಾಜ್ಯವನ್ನೇ ನಡಗಿಸಿತು. ನಿರಂತರ ಹೋರಾಟದ ಪ್ರತಿಫಲವಾಗಿ ಗಾಂಧೀಜಿಯವರು ಸ್ವತಂತ್ರ ತರುವಲ್ಲಿ ಯಶಸ್ವಿಯಾಗಿ, ಭಾರತದ ಪಿತಾಮಹರಾದರು ಎಂದರು.

ಗಾಂಧೀಜಿಗೆ ಮಹಾತ್ಮ ಎಂಬ ಬಿರುದು ಸ್ವತಂತ್ರ ಪಡೆದ ದಿನ ಬರಲಿಲ್ಲ. ಬದಲಾಗಿ ಹಿಂಸೆಯು ನಡೆಯುವ ಜಾಗದಲ್ಲಿ ಅಹಿಂಸೆ ನಡೆಯುವ ಅಸ್ತ್ರವನ್ನ ಉಪಯೋಗಿಸಿದ ಜಗತ್ತಿನ ಏಕೈಕ ಪಿತಾಮಹ ಮಹಾತ್ಮ ಗಾಂಧೀಜಿ ಎಂಬ ಹೆಗ್ಗಳಿಕೆ ಭಾರತೀಯರಿಗಿದೆ. ಸಮಾಜದಲ್ಲಿ ಸಹಜೀವನ ಇರಬೇಕು ಎಂಬ ಕನಸು ಕಂಡಿದ್ದರು. ಅವರ ಕನಸಿನಂತೆ ಎಲ್ಲರಲ್ಲಿಯೂ ಸಮಾನತೆ ಮತ್ತು ಸಹಜೀವನ ಇರಬೇಕು. ಇದರಿಂದ ಯಾರು ವಂಚಿತರಾಗಬಾರದು. ಶಾಂತಿಗಾಗಿಯೇ ತನ್ನ ಬದುಕನ್ನು ಮೀಸಲಿಟ್ಟ ಭಾರತದ ಮಹಾನ್ ಶಕ್ತಿ ಗಾಂಧೀಜಿ. ದುಶ್ಚಟ ಮುಕ್ತ ಭಾರತ ನಿರ್ಮಾಣವಾಗಬೇಕು. ಪಾನನಿರೋಧ ಸಂಪೂರ್ಣ ಬಂದಾಗಬೇಕು. ಮದ್ಯಪಾನದ ಆದಾಯದಿಂದಲೇ ಸರಕಾರ ನಡೆಸುವುದು ಎಂಬುವ ಚಿಂತನೆಯಲ್ಲಿ ನಮ್ಮ ಸರ್ಕಾರಗಳು ತೊಡಗಿವೆ. ಮಹಾತ್ಮ ಗಾಂಧೀಜಿಯವರಿಗೆ ನಿಜವಾಗಿಯೂ ನಾವು ಅರ್ಪಣೆಯ ಸಲ್ಲಿಸುವುದಾದರೆ, ಮದ್ಯಪಾನ ಮುಕ್ತ ಭಾರತ ಮಾಡಲೇಬೇಕೆಂಬ ಆಶಯವನ್ನು ಸಾಕಾರಗೊಳಿಸೋಣ. ಕಷ್ಟಪಟ್ಟು ವಿದ್ಯಾಭ್ಯಾಸ ಮಾಡಿ ಶಿಕ್ಷಣದಲ್ಲಿ ನಮ್ಮ ಯುವ ಜನತೆ ಮುಂದೆ ಬರಬೇಕು ಎಂಬುವ ಕನಸನ್ನು ಗಾಂಧೀಜಿ ಕಂಡಿದ್ದರು. ಸಾವಿರಾರು ವರ್ಷ ಕಳೆದರೂ, ಗಾಂಧೀಜಿ ಸ್ಮರಣೆ ಭಾರತದಲ್ಲಿ ನಿರಂತರವಾಗಿ ಜನಮಾನಸದಲ್ಲಿ ಅಚ್ಚಳಿಯದೆ ಉಳಿಯಲಿದೆ ಎಂದು ಹೇಳಿದರು.

ಸಮಾಜ ಸೇವಕ ಆಗ್ರೋ ಶಿವಣ್ಣ ಮಾತನಾಡಿ, ಸಿಟ್ಟಿನಿಂದ ನಾವು ಏನನ್ನು ಗೆಲ್ಲಲು ಸಾಧ್ಯವಿಲ್ಲ. ಅಹಿಂಸಾ ಚಳುವಳಿಯ ಮೂಲಕ ಸೌಹಾರ್ದಯುತವಾಗಿ ಹೋರಾಟ ಮಾಡಿ, ಭಾರತೀಯರಿಗಾಗಿ ಆರ್ಥಿಕ, ಸಾಮಾಜಿಕ ಮತ್ತು ಧಾರ್ಮಿಕವಾಗಿ ಭಾರತ ಶಕ್ತಿಶಾಲಿಯಾಗಲು ನಮಗೆಲ್ಲ ಅಹಿಂಸಾ ಹೋರಾಟದಿಂದಲೇ ಸಾಧ್ಯವಾಯಿತು. ಶ್ರೀ ಕ್ಷೇತ್ರ ಧರ್ಮಸ್ಥಳ ಸಂಸ್ಥೆಯವರು ಅಭಿವೃದ್ಧಿಗಾಗಿ ಕೋಟ್ಯಾಂತರ ಹಣವನ್ನು ವಿನಿಯೋಗಿಸಿ ರೈತರ ಬದುಕು ನೆಮ್ಮದಿಯಾಗಿರಲು ಪ್ರೇರಣೆಯಾಗಿದ್ದಾರೆ ಎಂದರು.

ಈ ವೇಳೆ ಕಾರ್ಯಕ್ರಮದಲ್ಲಿ ಜಿಲ್ಲಾ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಮಂಜುನಾಥ್, ಜಿ.ಪಂ.ಕೆಡಿಪಿ ಸದಸ್ಯೆ ದೀಪಿಕಾ ಸತೀಶ್, ಜಿಲ್ಲಾ ಜನಜಾಗೃತಿ ವೇದಿಕೆ ಅಧ್ಯಕ್ಷ ಬಿ.ಪಿ.ಓಂಕಾರಪ್ಪ, ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯರಾದ ತುಂಬಿನಕೆರೆ ಬಸವರಾಜ್, ಗೂಳಿಹಟ್ಟಿ ಕೃಷ್ಣಮೂರ್ತಿ, ಇಲ್ಕಲ್ ಅಶೋಕ್, ಬೀಸನಹಳ್ಳಿ ಜಗದೀಶ್, ಮುಖಂಡರಾದ ಹೆಬ್ಬಳ್ಳಿ ಮಲ್ಲಿಕಾರ್ಜುನ್, ರಂಗಸ್ವಾಮಿ, ತಿಪ್ಪೇಶಪ್ಪ, ಹೇಮಾವತಿ ಮತ್ತು ಸಿಂಧು ಅಶೋಕ್ ಸೇರಿದಂತೆ ನೂರಾರು ಜನರು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಮಾರಾಟ ಕೇಂದ್ರಗಳಿಗೆ ಪರವಾನಗಿ

» **ಚಿತ್ರದುರ್ಗ**

ಕುಕ್ಕುಟ ಮತ್ತು ಪಶು ಆಹಾರ ಉತ್ಪಾದನೆ ಮತ್ತು ಮಾರಾಟ ಕೇಂದ್ರಗಳಿಗೆ ಪರವಾನಗಿ (ಲೈಸನ್ಸ್) ಪಡೆದುಕೊಳ್ಳಬಹುದಾಗಿದೆ ಎಂದು ಪಶು ವೈದ್ಯಕೀಯ ಪಾಲಿಕ್ಲಿನಿಕ್ ಪರವಾನಗಿ ಪ್ರಾಧಿಕಾರ ಮತ್ತು ಉಪನಿರ್ದೇಶಕ ಡಾ.ಎನ್,ಎಸ್.ಹರೀಶ್ ತಿಳಿಸಿದ್ದಾರೆ.

### ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024–25ನೇ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ವೃತ್ತಿಪರ ಪದವಿ ಸ್ನಾತಕೋತ್ತರ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ಹೊಸದಾಗಿ ಪ್ರವೇಶಾತಿ ಕಲ್ಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅ.2 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅ.30 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು https://shp.karnataka.gov.in/bcwd ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಪ್ರವರ್ಗ–1, ಎಸ್.ಸಿ ಮತ್ತು ಎಸ್.ಟಿ ವರ್ಗಗಳಿಗೆ ವಾರ್ಷಿಕ ಆದಾಯ 2.50 ಲಕ್ಷ ಹಾಗೂ ಪ್ರವರ್ಗ–2ಎ, 2ಬಿ, 3ಎ, 3ಬಿ ವರ್ಗಗಳ ವಾರ್ಷಿಕ ಆದಾಯ ರೂ.1ಲಕ್ಷ ಹೊಂದಿರಬೇಕು. ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwdhelpline@gmail.com ಇ–ಮೇಲ್ ಮುಖಾಂತರ ಅಥವಾ ಹಿಂದುಳಿದ ವರ್ಗಗಳ ಜಿಲ್ಲಾ, ತಾಲ್ಲೂಕು ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004, 8050770005 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಡಿಕೆ, ಬಾಳೆ ನಾಶಪಡಿಸಿದ ಕಿಡಿಗೇಡಿಗಳು: ಪೊಲೀಸರಿಗೆ ದೂರು

» **ಮೊದಲ ಪುಟದಿಂದ**

ಗುರುವಾರ ಬೆಳಗ್ಗೆ ಜಮೀನಿಗೆ ಬಂದ ಮಾಲೀಕ ಜಿ.ಎಂ.ಚಂದ್ರಪ್ಪ ಪ್ರತಿದಿನದಂತೆ ಜಮೀನಿನಲ್ಲಿ ಸುತ್ತಾಡುವ ಸಂದರ್ಭದಲ್ಲಿ ನೀರಿನ ಪೈಪ್ ತುಂಡು ಮಾಡಿದ್ದು ಕಂಡುಬಂದಿದೆ. ಕೂಡಲೇ ನೋಡಲಾಗಿ ಫಸಲಿಗೆ ಬಂದಿದ್ದ ಸುಮಾರು 12 ಅಡಿಕೆ, 6 ಬಾಳೆ ಗಿಡಗಳನ್ನು ಕಡಿದು ಹಾಕಿದ್ದು ಕಂಡುಬಂತು. ಕೂಡಲೇ ಗಾಬರಿಗೊಂಡ ಆತನ ಗ್ರಾಮಸ್ಥರಿಗೆ ಮಾಹಿತಿ ನೀಡಿ ಪೊಲೀಸ್ ಠಾಣೆಗೆ ತೆರಳಿ ನನ್ನ ಜಮೀನಿನಲ್ಲಿ ಅಡಿಕೆ, ಬಾಳೆ ನಾಶಪಡಿಸಿದವರ ಮೇಲೆ ಕಾನೂನು ಕ್ರಮ ಕೈಗೊಳ್ಳುವಂತೆ ದೂರು ನೀಡಿದ್ದಾನೆ.

### ಮದ್ಯ ಮಾರಾಟ ನಿಷೇಧ

» **ದಾವಣಗೆರೆ**

ನಗರದ ಹೈಸ್ಕೂಲ್ ಮೈದಾನದಲ್ಲಿ ಪ್ರತಿಷ್ಠಾಪಿಸಿರುವ ಹಿಂದೂ ಮಹಾ ಗಣಪತಿ ವಿಸರ್ಜನೆಯು ಅಕ್ಟೋಬರ್ 5 ರಂದು ನಡೆಯಲಿದ್ದು ಮೆರವಣಿಗೆಯಲ್ಲಿ ಸಾವಿರಾರು ಭಕ್ತಾದಿಗಳು ಭಾಗವಹಿಸುವರು. ಈ ವೇಳೆ ಕಾನೂನು ಸುವ್ಯವಸ್ಥೆ ಮತ್ತು ಸಾರ್ವಜನಿಕ ಶಾಂತಿ ಕಾಪಾಡುವ ಮುನ್ನೆಚ್ಚರಿಕೆ ಕ್ರಮವಾಗಿ ಅಕ್ಟೋಬರ್ 4 ರ ಸಂಜೆ 6.00 ಗಂಟೆಯಿಂದ ಅ.5 ರ ಮಧ್ಯರಾತ್ರಿಯವರೆಗೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮದ್ಯ ಮಾರಾಟ ನಿಷೇಧಿಸಿ ಮದ್ಯದಂಗಡಿ ಮುಚ್ಚಲು ಜಿಲ್ಲಾ ದಂಡಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

### ಗ್ರಂಥಾಲಯ ಇಲಾಖೆಯಿಂದ ಆಯ್ಕೆಯಾದ ಪುಸ್ತಕ ಪ್ರಕಟ

» **ದಾವಣಗೆರೆ**

ಗ್ರಂಥಾಲಯ ಇಲಾಖೆಯಿಂದ 2021 ರಲ್ಲಿ ಪ್ರಥಮ ಆವೃತ್ತಿಯಾಗಿ ಪ್ರಕಟವಾದ ಪುಸ್ತಕಗಳ ಆಯ್ಕೆಗೆ ಲೇಖಕರು, ಪ್ರಕಾಶಕರು, ಮಾರಾಟಗಾರರಿಂದ ಪುಸ್ತಕಗಳನ್ನು ಆಹ್ವಾನಿಸಿದ್ದು ರಾಜ್ಯ ಮಟ್ಟದ ಆಯ್ಕೆ ಸಮಿತಿಯಿಂದಆಯ್ಕೆಯಾದತಾತ್ಕಾಲಿಕಪಟ್ಟಿಯನ್ನು ಇಲಾಖಾವೆಬ್‌ಸೈಟ್‌ಜಊಟ.ಇಚಿಡಿಟಿಚಿಣಚಿಞಚಿ.ರಂಆ.ಏಟ ನಲ್ಲಿ ಪ್ರಕಟಿಸಲಾಗಿದೆ ಮತ್ತು ದಾವಣಗೆರೆ ಕೇಂದ್ರ ಗ್ರಂಥಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಆಕ್ಷೇಪಣೆಗಳಿದ್ದಲ್ಲಿ ಅಕ್ಟೋಬರ್ 9 ರೊಳಗಾಗಿ ಲಿಖಿತವಾಗಿ ಸಲ್ಲಿಸಲು ಮುಖ್ಯ ಗ್ರಂಥಾಲಯಾಧಿಕಾರಿ ಪಿ.ಆರ್.ತಿಪ್ಪೇಸ್ವಾಮಿ ತಿಳಿಸಿದ್ದಾರೆ.

# ಜಾತಿ ಗಣತಿ ಬಿಡುಗಡೆಗೆ ಅಹಿಂದ ಆಗ್ರಹ



» **ಚಿತ್ರದುರ್ಗ**

ಶೋಷಿತರಗುಂಪಿನೊಳಗಿನಶೋಷಿತರನ್ನು ಸಮಾಜದ ಮುಖ್ಯವಾಹನಿಗೆ ತರುವ ಸಲುವಾಗಿ, ವಿಳಂಬ ಮಾಡದೆ, ರಾಜ್ಯದಲ್ಲಿ "ಒಳ ಮೀಸಲಾತಿ" ಅನುಷ್ಟಾನಗೊಳಿಸಲು ಹಾಗೂ ಹೆಚ್.ಕಾಂತರಾಜ್ ನೇತೃತ್ವದ, ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸಿದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2015 (ಜಾತಿ ಜನಗಣತಿ) ವರದಿ ಬಿಡುಗಡೆ ಮಾಡಲು ಸರ್ಕಾರಕ್ಕೆ ಅಹಿಂದ ಸಮುದಾಯಗಳವತಿಯಿಂದ ಸರ್ಕಾರಕ್ಕೆ ಆಗ್ರಹಿಸಲಾಯಿತು.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅಹಿಂದ ಚಳುವಳಿ,ಸಂಘಟಣೆಯ ಜಿಲ್ಲಾ ಸಂಚಾಲಕರಾದ ಕೆಂಚಪ್ಪ ಭಾರತ ಸಂವಿಧಾನದ ಅನುಚ್ಛೇದ 19ರ ಅವಕಾಶಗಳಡಿ ನಮ್ಮ ಸಂಘಟಣೆಯನ್ನು ಸ್ಥಾಪಿಸಲಾಗಿದೆ. ರಾಜ್ಯದಲ್ಲಿರುವ ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಮತ್ತು ದಲಿತ ಸಮುದಾಯಗಳನ್ನು ಈ ಸಂಘಟಣೆಯು ಪ್ರತಿನಿಧಿಸುತ್ತದೆ ದೇಶಕ್ಕೆ ಸ್ವಾತಂತ್ರ್ಯ ಪಲಿಸಿ ಮತ್ತು ಭಾರತ ಸಂವಿಧಾನ ಜಾರಿಗೊಂಡು 75 ವರ್ಷಗಳು ಕಳೆದಿವೆ. ದೇಶದಲ್ಲಿ ಮತ್ತು ರಾಜ್ಯದಲ್ಲಿ ಈಗಲೂ ಅಹಿಂದ ಸಮುದಾಯಗಳು– ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅಭಿವೃದ್ಧಿ ಹೊಂದಿಲ್ಲ. ಸಂಘಟಿತರಾಗಿಲ್ಲ. ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳು ಅಹಿಂದ ಸಮುದಾಯಗಳಲ್ಲಿ ಹೆಚ್ಚಿವೆ; ಈ ಅಹಿಂದ ಸಮುದಾಯಗಳನ್ನು ಸಂಘಟಿಸಬೇಕು: ಈ ಅಹಿಂದ ಸಮುದಾಯಗಳಲ್ಲಿ ಆರ್ಥಿಕವಾಗಿ ಹಿಂದುಳಿದಿರುವವರನ್ನು ಗುರುತಿಸಿ. ಅವರಿಗೆ ಆರ್ಥಿಕ ಶಕ್ತಿ ತುಂಬಬೇಕು; ಅಂತಿಮವಾಗಿ ಈ ಸಮುದಾಯಗಳಿಗೆ ರಾಜಕೀಯ ಪ್ರಜ್ಞೆ ಮತ್ತು ರಾಜಕೀಯ ಶಕ್ತಿ ತುಂಬಿ, ಈ ದೇಶದ ಸಂಪತ್ತು ಮತ್ತು ಆರ್ಥಿಕ ಶಕ್ತಿಗಳನ್ನು ಸಮನಾಗಿ ಹಂಚಿಕೆ ಮಾಡಿಸಬೇಕು: ಆ ಮೂಲಕ ದೇಶದಲ್ಲಿ ಸಮ ಸಮಾಜ ನಿರ್ಮಾಣ ಮಾಡಬೇಕು ಮತ್ತು "ಸಮಾನತೆಯ ಭಾರತ ರಾಷ್ಟ್ರ" ನಿರ್ಮಾಣ ಮಾಡಬೇಕೆಂಬ ಮೂಲ ಉದ್ದೇಶಗಳನ್ನು ಹೊಂದಿದೆ ಎಂದರು.

ಕರ್ನಾಟಕ ರಾಜ್ಯದಲ್ಲಿ 1990ರ ದಶಕದಿಂದ ಮಾದಿಗ ಜಾತಿಯವರು, ಸಂಘಟನೆಗಳು, ಸಮುದಾಯಗಳು ಸಂಘಟಿತರಾಗಿ ಒಳ ಮೀಸಲಾತಿಗಾಗಿ ನಡೆಸಿದ ಹಲವು ಹೋರಾಟಗಳ ಫಲವಾಗಿ 2004ರಲ್ಲಿ ಅಂದಿನ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನೇತೃತ್ವದ ಕಾಂಗ್ರೆಸ್ ಸರ್ಕಾರ, ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗವನ್ನು ನೇಮಕ ಮಾಡಿತು. ಈ ಆಯೋಗವು ಸುಮಾರು 7 ವರ್ಷಗಳ ಅವದಿ, ಅಧ್ಯಯನ ನಡೆಸಿ ದಿನಾಂಕ 14–7–2012ರಂದು ಅಂದಿನ ಮುಖ್ಯಮಂತ್ರಿ ಸದಾನಂದಗೌಡ ನೇತೃತ್ವದ ಬಿಜೆಪಿ ಸರ್ಕಾರಕ್ಕೆ ವರದಿ ಸಲ್ಲಿಸಿತು. ಈ ವರದಿ ಸರ್ಕಾರಕ್ಕೆ ಮಂಡನೆಯಾದ ತರುವಾಯದ ದಿನದಿಂದ ಈವರೆಗೆ, ಪ್ರಮುಖವಾಗಿ, ಮಾದಿಗ ಜಾತಿಯವರು ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ವರದಿಯನ್ನುಅನುಷ್ಟಾನಗೊಳಿಸಬೇಕೆಂದು ನಿರಂತರ ಹೋರಾಟಗಳನ್ನು ರಾಜ್ಯದಲ್ಲಿ ಮಾಡುತ್ತಿದ್ದಾರೆ ಎಂದರು.

ಶಿವಮೊಗ್ಗದ ಜಿಲ್ಲಾ ಮುಖ್ಯ ಸಂಚಾಲಕರಾದ ಸನಾವುಲ್ಲಾ ಮಾತನಾಡಿ, ಬೊಮ್ಮಾಯಿ ನೇತೃತ್ವದ ಸರ್ಕಾರ, ಸರ್ಕಾರಿ ಆದೇಶವೊಂದನ್ನು ಹೊರಡಿಸಿ, ಮಾದಿಗೆ ಜಾತಿಯವರಿಗೆ ಶೇ.6; ಹೊಲೆಯ ಜಾತಿಯವರಿಗೆ ಶೇ5.5 ಬೋವಿ ಮತ್ತು ಲಂಬಾಣಿ ಜಾತಿಯವರಿಗೆ ಶೇ.4.5, ಮತ್ತು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಇನ್ನೂಳಿದ ಜಾತಿಗಳಿಗೆ ಶೇ. 1ರಷ್ಟು ಹೀಗೆ ಒಟ್ಟು ಶೇ. 17 ಪ್ರಮಾಣದ ಮೀಸಲಾತಿಯನ್ನು ನಿಗದಿಪಡಿಸಿರುವುದಾಗಿ ಆದೇಶಿಸಿತು. ಕರ್ನಾಟಕ ಪತ್ರಗಳನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿ, ರಾಜ್ಯದಲ್ಲಿ ಒಳ ಮೀಸಲಾತಿಗೆ ಅವಕಾಶಗಳನ್ನು ಕೋರಿತು. ಕರ್ನಾಟಕ ರಾಜ್ಯದಲ್ಲಿ 2023ರಲ್ಲಿ ಅಸ್ತಿತ್ವಕ್ಕೆ ಬಂದ ಸಿದ್ದರಾಮಯ್ಯ ನೇತೃತ್ವದ ಹಾಲಿ ಸರ್ಕಾರ ರಾಜ್ಯದಲ್ಲಿ ಒಳ ಮೀಸಲಾತಿ ಅನುಷ್ಟಾನ ಮಾಡಲು ಭಾರತ ಸಂವಿಧಾನಕ್ಕೆ ಅಗತ್ಯ ತಿದ್ದುಪಡಿಗಳನ್ನು ತರಲು, ಕ್ಯಾಬಿನೆಟ್ ಸಭೆಯಲ್ಲಿ ತೀರ್ಮಾನ ತೆಗೆದುಕೊಂಡು, ಕೇಂದ್ರ ಸರ್ಕಾರಕ್ಕೆ ತನ್ನ ವಿನಂತಿಯನ್ನು ಕಳುಹಿಸಿತು.

ಕರ್ನಾಟಕ ರಾಜ್ಯದಲ್ಲಿ ಹಿಂದಿನ ಬಿಜೆಪಿ ಸರ್ಕಾರ ಹೊರಡಿಸಿದ್ದ, ಒಳ ಮೀಸಲಾತಿಯ ಸರ್ಕಾರಿ ಆದೇಶ ಇನ್ನೂ ಪೇಪರ್‌ನಲ್ಲಿದೆ. ಆದರೆ, ಕಾರ್ಯರೂಪದಲ್ಲಿ ಜಾರಿಯಾಗಿಲ್ಲ. ಕಾಂಗ್ರೆಸ್ ಪಕ್ಷ ಕರ್ನಾಟಕ ರಾಜ್ಯದಲ್ಲಿ 2023ರಲ್ಲಿ ಜರುಗಿದ ಕಳೆದ ಚುನಾವಣಾ ಪ್ರಣಾಳಿಕೆಯಲ್ಲಿ ಅಧಿಕಾರಕ್ಕೆ ಬಂದರೆ, ರಾಜ್ಯದಲ್ಲಿ ಒಳ ಮೀಸಲಾತಿ ಅನುಷ್ಟಾನಗೊಳಿಸುವಘೋಷಣೆಮಾಡಿತ್ತು. ಆ ಘೋಷಣೆ ಇನ್ನೂ ಅನುಷ್ಟಾನವಾಗಿಲ್ಲ. ಹಾಲಿ ಸಮಾಜದೊಳಗಿನ ಅಸಮಾನತೆಗಳ ಸತ್ಯಾಸತ್ತೆತೆಗಳನ್ನು ತಿಳಿಯಬೇಕಿದೆ. ಈಗಲೂ ಹಿಂದುಳಿದವರನ್ನು ಸಮಾಜದ ಮುಖ್ಯವಾಹಿನಿಗೆ ತರಲು, ಮೀಸಲಾತಿ,ಒಳ ಮೀಸಲಾತಿ ಒಳಗೊಂಡಂತೆ ಮತ್ತಷ್ಟು ಕಲ್ಯಾಣ ಕಾರ್ಯಕ್ರಮಗಳನ್ನು ಮುಂದುವರಿಸಬೇಕಿದೆ. ಸಮ ಸಮಾಜ ನಿರ್ಮಾಣ ಮಾಡಬೇಕಿದೆ. ಇದಕ್ಕಾಗಿ ಶ್ರೀ ಹೆಚ್.ಕಾಂತರಾಜ್ ನೇತೃತ್ವದ, ರಾಜ್ಯ ಹಿಂದುಳಿದ ವರ್ಗಗಳ ಆಯೋಗ ನಡೆಸಿದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ–2015(ಜಾತಿ ಜನಗಣತಿ) ವರದಿಯನ್ನು ಶ್ರೀ ಜಯಪ್ರಕಾಶ್ ಹೆಗಡೆ ನೇತೃತ್ವದ ಆಯೋಗ ಸರ್ಕಾರಕ್ಕೆ ಸಲ್ಲಿಸಿದ್ದು, ಆ ವರದಿ ಬಿಡುಗಡೆಯಾಗಬೇಕಿದೆ ಎಂದು ಒತ್ತಾಯಿಸಿದರು. ಗೋಷ್ಟಿಯಲ್ಲಿ ಸತ್ಯಪ್ಪ ಮಲ್ಲಾಪುರ, ಸಹ ಸಂಚಾಲಕರಾದ ತಿಪ್ಪೇಸ್ವಾಮಿ, ಯಾದವ ಮುಖಂಡರಾದ ಆನಂದ ಕುಮಾರ್, ಕ್ರೈಸ್ತ ಸಮುದಾಯದ ಮುಖಂಡರಾದ ಅವಿನಾಶ್, ರಾಜ್ಯ ಕಾರ್ಯದರ್ಶಿ ಸುರೇಂದ್ರ, ರಾಜ್ಯ ಖಜಾಂಚಿ ಸುಬ್ಬಣ್ಣ ನಾಗರಾಜ, ವಿನೋಧ್ ಭದ್ರಾವತಿ, ಕುರುಬ ಸಮುದಾಯದ ಮುಖಂಡರಾದ ಕರಿಯಪ್ಪ, ಜಗದೀಶ್, ಶಂಕರ್ ರಾವ್, ರಾಜಪ್ಪ, ಶ್ರೀಮತಿ ಜ್ಯೋತಿ ಲಕ್ಷ್ಮೀ, ಶ್ರೀಮತಿ ವರಲಕ್ಷ್ಮೀ, ಶ್ರೀಮತಿ ವಿನೋಧಮ್ಮ, ಶರೀಫವುಲ್ಲಾ ಖಾನ್, ಜಮೀರ್, ಮಲ್ಲಿಕಾರ್ಜುನ್ ಸೇರಿದಂತೆ ಇತರರು ಭಾಗವಹಿಸಿದ್ದರು.

**ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ**

# ದೌರ್ಜನ್ಯದಡಿ ಕೊಲೆಯಾದ ಕುಟುಂಬದ ಅವಲಂಭಿತರಿಗೆ ಸರ್ಕಾರಿ ನೌಕರಿ, ಪರಿಹಾರ



» **ದಾವಣಗೆರೆ**

ದೌರ್ಜನ್ಯದಡಿ ಕೊಲೆಯಾದ ಕುಟುಂಬದ ಅವಲಂಭಿತರಿಗೆ ಸರ್ಕಾರಿ ಉದ್ಯೋಗ ಮತ್ತು ಪರಿಹಾರವನ್ನು ನೀಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರು ಗುರುವಾರ (ಅ.3) ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ಜಾಗೃತಿ ಮತ್ತು ಉಸ್ತುವಾರಿ ಸಮಿತಿಯ 3 ನೇ ತ್ರೈಮಾಸಿಕ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಈ ವರ್ಷ ಫೆಬ್ರವರಿ 2 ರಂದು ಜಗಳೂರು ಪೊಲೀಸ್ ಠಾಣಾ ವ್ಯಾಪ್ತಿಯ ಗಾಂಧಿನಗರದ ಡಾಕ್ಯಾನಾಯ್ಕ್ ಬಿನ್ ರಾಮಾನಾಯ್ಕ್ ಮತ್ತು ಏಪ್ರಿಲ್ 4 ರಂದು ಹೊನ್ನಾಳಿಯ ಮಂಜಪ್ಪ ಬಿನ್ ಬಸಪ್ಪ ಹಾಗೂ ಸೆಪ್ಟೆಂಬರ್ 18 ರಂದು ನ್ಯಾಮತಿ ತಾಲ್ಲೂಕಿನ ಮರಿಗೊಂಡನಹಳ್ಳಿ ಶಿವರಾಜ್ ಬಿನ್ ತೀರ್ಥಪ್ಪ ಇವರು ದೌರ್ಜನ್ಯದಡಿ ಕೊಲೆಯಾಗಿದ್ದು ಸರ್ಕಾರದ ಆದೇಶದಂತೆ ಕುಟುಂಬದವರಿಗೆ ಸರ್ಕಾರಿ ಉದ್ಯೋಗ ನೀಡಲಾಗುತ್ತದೆ. ಈಗಾಗಲೇ ಡಾಕ್ಯಾನಾಯ್ಕ್ ಇವರ ಕುಟುಂಬದವರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಲಾಗಿದ್ದು ಉಳಿದ ಇಬ್ಬರಿಂದ ದಾಖಲೆಗಳನ್ನು ಪಡೆದು ಸರ್ಕಾರಕ್ಕೆ ಕಳುಹಿಸಲು ಇವರ ಸಹಾಯಕ್ಕಾಗಿ ಕಂದಾಯ ನಿರೀಕ್ಷಕರಿಗೆ ಸೂಚನೆ ನೀಡಲಾಗಿದ್ದು ಆದಷ್ಟು ಬೇಗ ಇವರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಕಳುಹಿಸಿ ನೆರವು ನೀಡಲಾಗುತ್ತದೆ, ಇತ್ತೀಚೆಗೆ ಕೊಲೆಯಾದ ಮಾರಿಗೊಂಡನಹಳ್ಳಿ ಶಿವರಾಜ್ ಮನೆಗೆ ಭೇಟಿ ನೀಡಿದ್ದು ಅತ್ಯಂತ ಸಂಕಷ್ಟದಲ್ಲಿದ್ದಾರೆ, ಇವರಿಗೆ ಆದಷ್ಟು ಬೇಗ ಸರ್ಕಾರದ ಸವಲತ್ತನ್ನು ತಲುಪಸಿಬೇಕಾಗಿದೆ ಎಂದರು.

ದೌರ್ಜನ್ಯ ಪ್ರಕರಣದಡಿ ಈ ವರ್ಷ ಒಟ್ಟು 60 ಪ್ರಕರಣಗಳು ದಾಖಲಾಗಿದ್ದು ಇದರಲ್ಲಿ 3 ಕೊಲೆ, 8 ಅತ್ಯಾಚಾರ, 49 ಇತರೆ ದೌರ್ಜನ್ಯದ ಪ್ರಕರಣಗಳಾಗಿವೆ. ಇದರಲ್ಲಿ 28 ಕ್ಕೆ ಚಾರ್ಜ್‌ಶೀಟ್ ಸಲ್ಲಿಕೆಯಾಗಿವೆ, ಎಫ್‌ಐಆರ್ ಹಂತದಲ್ಲಿ ರೂ. 38.70 ಲಕ್ಷ ಮತ್ತು ಚಾರ್ಜ್‌ಶೀಟ್ ಹಂತದಲ್ಲಿ ರೂ.79.88 ಲಕ್ಷ ಸೇರಿ 1.18 ಕೋಟಿ ಪರಿಹಾರ ನೀಡಿದ್ದು 66 ಪರಿಶಿಷ್ಟ ಜಾತಿ, 56 ಪರಿಶಿಷ್ಟ ಪಂಗಡದವರು ಸೇರಿ 122 ಸಂತ್ರಸ್ಥರಿಗೆ ಪರಿಹಾರ ಒದಗಿಸಲಾಗಿದೆ.

ದೌರ್ಜನ್ಯ ತಡೆ ಕಾಯ್ದೆಯಡಿ ಎರಡನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ 2024 ತ ಜುಲೈನಲ್ಲಿ 144, ಆಗಸ್ಟ್ ನಲ್ಲಿ 147, ಸೆಪ್ಟೆಂಬರ್‌ನಲ್ಲಿ 145 ಪ್ರಕರಣಗಳಿದ್ದು ಈ ಮೂರು ತಿಂಗಳ ಅವಧಿಯಲ್ಲಿ 10 ಪ್ರಕರಣಗಳು ವಿಲೆಯಾಗಿವೆ. ಪ್ರಸ್ತುತ ಸೆಪ್ಟೆಂಬರ್ ಅಂತ್ಯಕ್ಕೆ 143 ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇದ್ದು ಇದರಲ್ಲಿ 2018 ರ 1, 2019 ರ 3, 2020 ರ 20, 2021 ರಲ್ಲಿನ 14, 2022 ರ ಅವಧಿಯ 32, 2023 ರಲ್ಲಿನ 49 ಮತ್ತು 2024 ರಲ್ಲಿನ 34 ಪ್ರಕರಣಗಳಿವೆ. ಚಾರ್ಜ್‌ಶೀಟ್ ಹಾಕದಿರುವ ಪ್ರಕರಣಗಳಲ್ಲಿ ಕೂಡಲೇ ಚಾರ್ಜ್‌ಶೀಟ್ ಹಾಕಲು ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ನಾಗರಾಜ್, ಸಮಿತಿ ನಾಮನಿರ್ದೇಶಿತ ಸದಸ್ಯರು ಉಪಸ್ಥಿತರಿದ್ದರು.

# ಕೆವಿಎಲ್ ಸೊಸೈಟಿ ಸದಸ್ಯತ್ವ ನೊಂದಣಿ




» **ಹೊಳಲ್ಕೆರೆ**

ವೀರಶೈವ ಲಿಂಗಾಯಿತ್ತರಲ್ಲಿ ಒಂದಿಷ್ಟು ಗೊಂದಲವಿದ್ದರೂ, ನಾವೆಲ್ಲ ಇಷ್ಟಲಿಂಗ ಧರಿಸುವವರು, ಹಾಗಾಗಿ ಸಮುದಾಯದಲ್ಲಿರುವ ದುರ್ಬಲರನ್ನು ಮೇಲ್ಲೇತ್ತು ಕೆಲಸ ಕೆ.ವಿ.ಎಲ್ ಎಂಪ್ಲಾಯೀಸ್ ಸೊಸೈಟಿ ಕರ್ತವ್ಯ ಆಗಬೇಕೆಂದು ಸಾಣೇಹಳ್ಳಿ ಡಾ.ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಜಿ ತಿಳಿಸಿದರು.ಅವರು ಪಟ್ಟಣದ ಸ್ನೇಹ ಕಂಪರ್ಟ್‌ನಲ್ಲಿ ಕೆ.ವಿ.ಎಲ್ ಎಂಪ್ಲಾಯೀಸ್ ಹೌಸಿಂಗ್ ಕೋ ಅಪರೇಟಿವ್ ಸೊಸೈಟಿ ಬುಧವಾರ ಹಮ್ಮಿಕೊಂಡಿದ್ದ ಸದಸ್ಯತ್ವ ನೋಂದಣಿ ಅಭಿಯಾನ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದರು.ಶರಣ ಹೊಳಿಗೆ ಮಾರಯ್ಯ ವಚನದಲ್ಲಿ ಹೇಳಿದಂತೆ ಚಿನ್ನದ ಗಂಟನ್ನು ಸತ್ತ ಹೆಣಕ್ಕೆ ಸಮಾನ ಎನ್ನುವ ಸಂದೇಶ ನೀಡಿದ್ದಾರೆ. ಇಲ್ಲಿ ಹಣಕ್ಕೆ ಪ್ರಮುಖ್ಯತೆ ನೀಡುವ ಅಗತ್ಯವಿಲ್ಲ. ವೀರಶೈವ ಲಿಂಗಾಯಿತ್ತ ಸಂಘಟನೆ ಅದರ್ಶದ ತಳದಲ್ಲಿ ಇರುವಬೇಕು. ಸಮಾಜದಲ್ಲಿ ಒಂದು ಒತ್ತು ಊಟಕ್ಕೆ ಇಲ್ಲದ ಕುಟುಂಬಗಳನ್ನು ಗುರುತಿಸಿ ಅವರಿಗೆ ನೇರವು ನೀಡಬೇಕು. ಕೆಳ ಹಂತದಲ್ಲಿರುವ ಪ್ರತಿಭಾವಂತರನ್ನು ಗುರುತಿಸಿ ಸೌಲಭ್ಯಗಳನ್ನು ಕಲ್ಪಿಸುವ ಗುರಿ ಹೊಂದಬೇಕು. ವರ್ತಮಾನದ ಬಗ್ಗೆ ಚಿಂತಿಸಿಬೇಕೆಂದರು.

ನಾವು ಉತ್ತರ ಕರ್ನಾಟಕದವರು. ನಮ್ಮ ಮನೆಯಲ್ಲಿ ನಮ್ಮನ್ನು ಓದಿಸುವ ಸಾಮಾರ್ಥವಿಲ್ಲದಿದ್ದಾಗ ನಾನು ಸಿರಿಗೆರೆ ಮಠಕ್ಕೆ ಬಂದು ನನಗೆ ಜವಾನನ ಕೆಲಸ ಕೊಡಿ ಎಂದು ಗುರುಗಳನ್ನು ಕೇಳಿದ್ದೇ. ನನಗೆ ಗುರುಗಳು ಹಣ ಕೊಡುತ್ತೇನೆ ಓದು ಎಂದು ಹೇಳಿದ್ದರು. ನಾನು ಪಿಯುಸಿ ಪೇಲಾಗಿ ನಂತರ ಗುರುಗಳ ಪ್ರೇರಣೆಯಿಂದ ಪಿಯುಸಿ ಪಾಸಾಗಿ, ನಂತರ ಉನ್ನತ ಶಿಕ್ಷಕಣದಲ್ಲಿ ಚಿನ್ನದ ಪದಕ ಪಡೆದುಕೊಂಡಿದ್ದೆ. ಹಾಗಾಗಿ ಮಕ್ಕಳು ವಿವಿಧ ಕಾರಣಗಳಿಂದ ಓದುವ ಅವಕಾಶ ಇಲ್ಲದೆ ಇದ್ದಾಗ ಪ್ರತಿಭೆ ಅನಾವರಣ ಸಾಧ್ಯವಿಲ್ಲ ಎಂದರು.

## ಪ್ರಮುಖ ಸುದ್ದಿ

**ವಿದ್ಯಾರ್ಥಿ ಚೇತನ ಆಯುಷ್ ಸೇವಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಡಿ.ಸುಧಾಕರ್**

# ವಸತಿ ಶಾಲೆ ಮಕ್ಕಳಿಗೆ ಆಯುಷ್ ಕಿಟ್ ವಿತರಣೆ



» **ಚಿತ್ರದುರ್ಗ**

ಮಕ್ಕಳ ರೋಗ ನಿರೋಧಕ ಶಕ್ತಿ ಹೆಚ್ಚಿಸುವ ಹರಿದ್ರಾಕಾಂಡ ಗ್ರಾನ್ಯೂಲ್ಸ್, ದೇಹ ಪುಷ್ಠಿಗೆ ಪೂರಕವಾದ ಚ್ಯವನ ಪ್ರಾಶ ಹಾಗೂ ನೆನಪಿನ ಶಕ್ತಿ ಹೆಚ್ಚಿಸುವ ಕೂಷ್ಮಾಂಡಾವಲೇಹ್ಯ ಒಳಗೊಂಡಿರುವ "ವಿದ್ಯಾರ್ಥಿ ಚೇತನ ಆಯುಷ್ ಕಿಟ್"ಅನ್ನು ವಸತಿ ಶಾಲೆ ವಿದ್ಯಾರ್ಥಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ವಿತರಿಸಿದರು.

ನಗರದಜಿಲ್ಲಾಧಿಕಾರಿಗಳಕಚೇರಿ ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಆಯುಷ್ ಇಲಾಖೆಯ ಆಯುಷ್ಮಾನ್ ಭಾರತ್ ಯೋಜನೆಯ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಕಾರ್ಯಕ್ರಮಗಳಡಿಯಲ್ಲಿ ವಿದ್ಯಾರ್ಥಿ ಚೇತನ ಆಯುಷ್ ಸೇವಾ ಕಾರ್ಯಕ್ರಮವನ್ನು ಚಿತ್ರದುರ್ಗ ತಾಲ್ಲೂಕಿನ ಬೊಮ್ಮೇನಹಳ್ಳಿಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಮಕ್ಕಳಿಗೆ ಆಯುಷ್ ಕಿಟ್ ನೀಡುವ ಮೂಲಕ ಜಿಲ್ಲಾಮಟ್ಟದಲ್ಲಿ ಸಾಂಕೇತಿಕವಾಗಿ ಚಾಲನೆ ನೀಡಿದರು.

ಜಿಲ್ಲಾ ಆಯುಷ್ ಇಲಾಖೆಯ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಯೋಜನೆಯಡಿ ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಶಾರೀರಿಕ ಮತ್ತು ಮಾನಸಿಕ ಆರೋಗ್ಯ ಉತ್ತಮಗೊಳಿಸುವ ನಿಟ್ಟಿನಲ್ಲಿ "ವಿದ್ಯಾರ್ಥಿ ಚೇತನ" ಎನ್ನುವ ಆಯುಷ್ ಸೇವಾ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ 9 ವಸತಿ ಶಾಲೆಗಳಲ್ಲಿ ಆಯೋಜಿಸಲು ಉದ್ದೇಶಿಸಲಾಗಿದೆ.

ಈ ಕಾರ್ಯಕ್ರಮದಲ್ಲಿ ನಾಲ್ಕು ತಿಂಗಳುಗಳ ಕಾಲ ನಿಯಮಿತವಾಗಿ ಆಯುಷ್ ವೈದ್ಯಾಧಿಕಾರಿಗಳು ಭೇಟಿ ನೀಡಿ ವೈದ್ಯಕೀಯ ತಪಾಸಣೆ ಮಾಡಿ, ಔಷಧಿ ಸಸ್ಯಗಳ ಪರಿಚಯ, ಮನೆ ಮದ್ದು ಅರಿವು, ಸದೃಢ ಆರೋಗ್ಯಕ್ಕಾಗಿ ಉತ್ತಮ ಜೀವನ ಶೈಲಿ, ರೋಗ ನಿರೋಧಕ ಶಕ್ತಿ ಹಾಗೂ ಜ್ಞಾಪಕ ಶಕ್ತಿ ಹೆಚ್ಚಿಸಲು ಅನುಸರಿಸಬೇಕಾದ ವಿಧಾನಗಳ ಇತ್ಯಾದಿ ಆಯುಷ್ ವೈದ್ಯ ಪದ್ಧತಿಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಇದಾಗಿದೆ.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಚಿವರಿಗೆ, ಇತರೆ ಗಣ್ಯರಿಗೆ, ಸಾರ್ವಜನಿಕರಿಗೆ ಮತ್ತು ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರಿಗೆ ಖರ್ಜೂರಾದಿ ಮಂಥ ಪಾನೀಯ ನೀಡಿದರು. ಸ್ವೀಕರಿಸಿದವರೆಲ್ಲರೂ ಉತ್ತಮ ಪ್ರಶಂಸೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ ನಾಗಸಮುದ್ರ ಸೇರಿದಂತೆ ಇತರೆ ಗಣ್ಯರು, ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಹಾಗೂ ಆಯುಷ್ ಇಲಾಖೆಯ ವೈದ್ಯಾಧಿಕಾರಿಗಳು, ಕಚೇರಿ ಸಿಬ್ಬಂದಿ ಇದ್ದರು.

**ಫಾಸ್ಟ್ ನ್ಯೂಸ್**

## ವೃತ್ತಿಪರ ಪದವಿ, ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳಿಂದ ಹೊಸದಾಗಿ ಹಾಸ್ಟೆಲ್ ಪ್ರವೇಶಕ್ಕಾಗಿ ಅರ್ಜಿ

» **ದಾವಣಗೆರೆ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಲ್ಲಿ ಹೊಸದಾಗಿ ವೃತ್ತಿಪರ ಕೋರ್ಸ್‌ಗಳಾದ ಪದವಿ, ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವರ್ಗ 1, 2ಎ.ಬಿ, 3ಎ.ಬಿ ಹಾಗೂ ಪ.ಜಾತಿ, ಪ.ಪಂಗಡದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು https;//shp.karnataka.gov.in/bcwd ಮೂಲಕ ಅಕ್ಟೋಬರ್ 30 ರೊಳಗಾಗಿ ಅರ್ಜಿ ಸಲ್ಲಿಸಲು ಜಿಲ್ಲಾ ಬಿಸಿಎಂ ಅಧಿಕಾರಿ ಗಾಯಿತ್ರಿ ಕೆ.ಹೆಚ್ ತಿಳಿಸಿದ್ದಾರೆ.

## ದ್ವಿತೀಯ ಪಿಯುಸಿ ಸಿಇಟಿ, ನೀಟ್ ಉಚಿತ ತರಬೇತಿ

» **ದಾವಣಗೆರೆ**

ಜಿಲ್ಲಾ ಪಂಚಾಯತ್‌ನಿಂದ ಸರ್ಕಾರಿ ಕಾಲೇಜ್‌ನಲ್ಲಿ ದ್ವಿತೀಯ ಪಿ.ಯು.ಸಿ.ವಿಜ್ಞಾನ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಕ್ಟೋಬರ್ 4 ರಂದು ಮಧ್ಯಾಹ್ನ 1 ಗಂಟೆಗೆ ವಿದ್ಯಾನಗರದಲ್ಲಿನ ಕುವೆಂಪು ಕನ್ನಡ ಭವನದಲಿ ಉಚಿತ ಸಿಇಟಿ ಮತ್ತು ನೀಟ್ ಪರೀಕ್ಷೆ ತರಬೇತಿ ನೀಡಲಾಗುತ್ತದೆ. ಈ ಕಾರ್ಯಕ್ರಮಕ್ಕೆ ಗಣಿ, ಭೂ ವಿಜ್ಞಾನ ಮತ್ತು ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಹಾಗೂ ಲೋಕಸಭಾ ಸದಸ್ಯರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಚಾಲನೆ ನೀಡುವರು ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

» **ದಾವಣಗೆರೆ**

66/11 ಕೆ.ವಿ. ವಿದ್ಯುತ್ ಕೇಂದ್ರದಿಂದ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಆಕ್ಟೋಂಬರ್ 4 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಆಂಜನೇಯ ಬಡಾವಣೆ, ಮೆಡಿಕಲ್ ಬಾಯ್ಸ್ ಹಾಸ್ಟಲ್ ರಸ್ತೆ, ಗುಂಡಿ ಸ್ಕೂಲ್, ವೆಂಕಟೇಶ್ವರ ದೇವಸ್ಥಾನ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

## ಉಚಿತ ಬಸ್ ಪಾಸ್ ನೀಡುವಲ್ಲಿ ಸರ್ಕಾರದ ನಿಬಂಧನೆಗೆ ಪತ್ರಕರ್ತ ಸಂಘಟನೆ ಆಕ್ರೋಶ

» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುವ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡುವಂತೆ ಕಾರ್ಯನಿರತ ಪತ್ರಕರ್ತರ ಧ್ವನಿಸಂಘಟನೆ ರಾಜ್ಯಸರ್ಕಾರವನ್ನು ಒತ್ತಾಯ ಪಡಿಸಿದ ಹಿನ್ನೆಲೆಯಲ್ಲಿ ಇತ್ತೀಚೆಗೆ ತಾನೇ ಕೆಲವೊಂದು ನಿಬಂಧನೆಯೊಂದಿಗೆ ಪತ್ರಕರ್ತರಿಗೆ ರಾಜ್ಯ ರಸ್ತೆಸಾರಿಗೆ ಸಂಸ್ಥೆಯ ಬಸ್‌ನಲ್ಲಿ ಜಿಲ್ಲಾ ಮಟ್ಟದಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಮಾಡಿಕೊಡುವ ನಿರ್ಧಾರವನ್ನು ಸರ್ಕಾರ ಕೈಗೊಂಡಿದೆ. ಆದರೆ, ಸರ್ಕಾರದ ಈ ನಿರ್ಧಾರ ಅವೈಜ್ಞಾನಿಕತೆಯಿಂದ ಕೂಡಿದ್ದು, ನಿಬಂಧನೆಗಳನ್ನು ಸಡಿಲಗೊಳಿಸಿ ಎಲ್ಲಾ ಪತ್ರಕರ್ತರಿಗೂ ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡುವಂತೆ ಸಂಘಟನೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್‌ಗೆ ಮನವಿ ಮಾಡಿದೆ. ಈ ಬಗ್ಗೆ ಸರ್ಕಾರದ ನಿರ್ಣಯಕೈಗೊಳ್ಳದೇ ಇದ್ದಲ್ಲಿ ಅ.6ರ ಭಾನುವಾರ ಸಚಿವರ ಮನೆ ಮುಂದೆ ಧರಣಿ ನಡೆಸಲು ಸಂಘಟನೆ ನಿರ್ಧರಿಸಿದೆ ಎಂದು ಜಿಲ್ಲಾ ಕಾರ್ಯಾಧ್ಯಕ್ಷ ದ್ಯಾಮರಾಜ್ ತಿಳಿಸಿದ್ದಾರೆ. ತಾಲ್ಲೂಕು ಅಧ್ಯಕ್ಷ ಎಂ.ಮಂಜುನಾಥ, ಗೌರವಾಧ್ಯಕ್ಷ ಡಿ.ವೀರಣ್ಣ, ನಾಗರಾಜು, ಶ್ರೀನಿವಾಸ್, ಲೋಕೇಶ್, ವಿಜಯಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಪಿಂಚಣಿ ಅದಾಲತ್

» **ಬಳ್ಳಾರಿ**

ಕಾರ್ಮಿಕರ ಭವಿಷ್ಯ ನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಅ.14 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ತಿಳಿಸಿದ್ದಾರೆ. ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ-ಮೇಲ್ ಮೂಲಕ ಪಿ.ಪಿ.ಒ ಸಂಖ್ಯೆ, ವಿಳಾಸ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪವ ಹಾಗೂ ಇತ್ಯಾದಿಗಳನ್ನು ಅ.10 ರೊಳಗಾಗಿ ತಿಳಿಸಬಹುದು.

# ಶರಣ ಸಂಸ್ಕೃತಿ ಕ್ರೀಡಾ ಜಾತ್ರೆ 5ರಿಂದ; ಸ್ವಾಮೀಜಿ

» **ಚಿತ್ರದುರ್ಗ**

ಜಿಲ್ಲೆಯ ಯುವಕ್ರೀಡಾ ಪ್ರತಿಭಾ ಶೋಧ ಹಾಗೂ ಜಿಲ್ಲೆಯ ಕ್ರೀಡಾಲೋಕವನ್ನು ವಿಸ್ತರಿಸುವ ಮತ್ತು ಉತ್ತೇಜಿಸುವ ಆಶಯದೊಂದಿಗೆ ಅ. 5 ರಿಂದ 7ರವರೆಗೆ ಕ್ರೀಡಾಕೂಟವು ನಡೆಯಲಿದೆ ಎಂದು ಶ್ರೀ ಜಗದ್ಗುರು ಮುರುಘರಾಜೇಂದ್ರ ಬ್ರಹನ್ಮಠದ ಹಾಗೂ ವಿದ್ಯಾಪೀಠದ ಆಡಳಿತ ಮಂಡಳಿ ಸದಸ್ಯರಾದ ಡಾ. ಬಸವಕುಮಾರ ಸ್ವಾಮಿಗಳು ತಿಳಿಸಿದರು.



ನಗರದ ಹಳೇ ಮಾಧ್ಯಮಿಕ ಶಾಲಾ ಆವರಣದಲ್ಲಿ ಅ. 5 ರಿಂದ ನಡೆಯಲಿರುವ ಕ್ರೀಡಾ ಜಾತ್ರೆಯ ಮಾಹಿತಿಯನ್ನು ನೀಡಿದ ಶ್ರೀಗಳು, ಜಯದೇವ ಜಗದ್ಗುರುಗಳು ಮಾಡದ ಕೆಲಸಗಳು ಇಲ್ಲ. ಪೂಜ್ಯರು ಅನೇಕ ಸಂಘ ಸಂಸ್ಥೆಗಳಿಗೆ ದಾನ ಮಾಡಿರುತ್ತಾರೆ. ಅವರು ಸುತ್ತು ಕಟ್ಟು ಎಂಬ ಮಂತ್ರದಂತೆ ಕಾರ್ಯನಿರ್ವಹಿಸಿರುತ್ತಾರೆ. ಜಯದೇವ ಜಗದ್ಗುರುಗಳ ಕಾಲವನ್ನು ಸುವರ್ಣ ಯುಗವೆಂದು ಕರೆಯುತ್ತಾರೆ.

ಜಿಲ್ಲೆಯ ಸರ್ಕಾರಿ ಹಾಗೂ ಖಾಸಗಿ ಶಾಲೆಗಳ 17ವರ್ಷದೊಳಗಿನ 8, 9 ಮತ್ತು 10ನೇ ತರಗತಿ ವಿದ್ಯಾರ್ಥಿಗಳಿಗೆ ಕಬಡ್ಡಿ, ಖೋಖೋ,ಹ್ಯಾಂಡ್‌ಬಾಲ್,ವಾಲಿಬಾಲ್ ಕ್ರೀಡೆಗಳು ಹಾಗೂ ಮಹಿಳೆಯರಿಗಾಗಿ ಹಗ್ಗ-ಜಗ್ಗಾಟ, ಮ್ಯೂಜಿಕಲ್ ಚೇರ್, ಮಡಿಕೆ ಹೊಡೆಯುವುದು, ಬಕೆಟ್ ಇನ್ ದ ಬಾಲ್, ಥ್ರೋಬಾಲ್, ಶರಣ-ಶರಣೆಯರ ವೇಷಭೂಷಣ ಸ್ಪರ್ಧೆಗಳು ನಡೆಯಲಿವೆ ಎಂದು ತಿಳಿಸಿ ಜಯದೇವ ವಿದ್ಯಾರ್ಥಿ ನಿಲಯಗಳಲ್ಲಿ ವ್ಯಾಸಂಗ ಮಾಡಿ ಉನ್ನತ ಹುದ್ದೆಯಲ್ಲಿರುವವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಗುವುದು. ಶ್ರೀಗಳ ಸತ್ಕಾರ್ಯಗಳನ್ನು ನಾಡಿಗೆ ತಿಳಿಸುವ ಕೆಲಸ ಮಾಡಲಾಗುವುದು.

5 ರ ಬೆಳಿಗ್ಗೆ 10ಕ್ಕೆ ಜಯದೇವ ಕಪ್ ಕ್ರೀಡಾಕೂಟ ಅಂಗವಾಗಿ ಮೋಟಾರ್ ಬೈಕ್ ಜಾಥಾ ನಡೆಯಲಿದ್ದು, ನಗರಸಭೆ ಅಧ್ಯಕ್ಷೆ ಶ್ರೀಮತಿ ಸುಮಿತ ರಾಘವೇಂದ್ರ ಜಾಥಾವನ್ನು ಉದ್ಘಾಟಿಸುವರು. ಜಾಥಾವು ಕನಕ ವೃತ್ತದಿಂದ ಪ್ರಾರಂಭವಾಗಿ ಬುರುಜನಹಟ್ಟಿ, ಚಿಕ್ಕಪೇಟೆ, ದೊಡ್ಡಪೇಟೆ, ರಂಗಯ್ಯನಬಾಗಿಲು, ಮದಕರಿ ವೃತ್ತ, ಅಂಬೇಡ್ಕರ್ ವೃತ್ತ, ಗಾಂಧಿ ವೃತ್ತ, ಪ್ರಧಾನ ಅಂಚೆ ಕಚೇರಿ ವೃತ್ತ, ಕೆ.ಎಸ್.ಆರ್.ಟಿ.ಸಿ. ಬಸ್ ಸ್ಟ್ಯಾಂಡ್, ಬಿ.ಡಿ.ರಸ್ತೆ, ಜೆ.ಎಂ.ಐ.ಟಿ. ವೃತ್ತದ ಮೂಲಕ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಮುಕ್ತಾಯವಾಗಲಿದೆ ಎಂದರು.

ಮಧ್ಯಾಹ್ನ 4ಗಂಟೆಗೆ ಜಯದೇವ ಕಪ್ ಪಂದ್ಯಾವಳಿ ಅಂಗವಾಗಿ ಅಂಬೇಡ್ಕರ್ ವೃತ್ತದಲ್ಲಿ ಶ್ರೀ ಜಯದೇವ ಶ್ರೀಗಳ ಬೆಳ್ಳಿಮೂರ್ತಿಯ ಪಲ್ಲಕ್ಕಿ ಉತ್ಸವ ಹಾಗೂ ಪಥ ಸಂಚಲನ ಪ್ರಾರಂಭವಾಗಲಿದ್ದು, ಸಂಸದ ಗೋವಿಂದ ಎಂ.ಕಾಳಜೋಳ ಅವರು ಪಥ ಸಂಚಲನವನ್ನು ಉದ್ಘಾಟಿಸುವರು.

ಶ್ರೀ ಮನ್ಮಹಾರಾಜ ನಿರಂಜನ ಜಗದ್ಗುರು ಜಯದೇವ ಶ್ರೀಗಳ ಬೆಳ್ಳಿಮೂರ್ತಿಯ ಪಲ್ಲಕ್ಕಿ ಉತ್ಸವ ಹಾಗೂ ಪಥ ಸಂಚಲನವು ನಗರದ ಅಂಬೇಡ್ಕರ್ ವೃತ್ತದಿಂದ ಪ್ರಾರಂಭವಾಗಿ ಬಸವಮಂಟಪ ರಸ್ತೆ, ರಂಗಯ್ಯನ ಬಾಗಿಲು, ದೊಡ್ಡಪೇಟೆ, ಚಿಕ್ಕಪೇಟೆ, ಬುರುಜನಹಟ್ಟಿ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ನೀಲಕಂಠೇಶ್ವರ ದೇವಸ್ಥಾನ, ಗಾಂಧಿ ವೃತ್ತ, ಬಿ.ಡಿ.ರಸ್ತೆ ಮೂಲಕ ಹಳೆಯ ಮಾಧ್ಯಮಿಕ ಶಾಲಾ ಆವರಣದವರೆಗೆ ನಡೆಯಲಿದೆ ಎಂದರು.

ಸಂಜೆ 6 ಗಂಟೆಗೆ ನಡೆಯುವ ಶ್ರೀ ಜಯದೇವ ಕಪ್ ಹೊನಲು ಬೆಳಕಿನ ಕ್ರೀಡಾಕೂಟವನ್ನು ಕಾರ್ಮಿಕ ಸಚಿವ ಸಂತೋಷ್ ಲಾಡ್ ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು ಮತ್ತು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮಿಗಳು ಸಮ್ಮುಖ ವಹಿಸಲಿದ್ದು, ಸಂಸದ ಬಿ.ವೈ. ರಾಘವೇಂದ್ರ, ರಾಜ್ಯ ಲಿಡ್ಕರ್ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ್, ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಮಾಜಿ ಸಂಸದ ಬಿ.ಎನ್. ಚಂದ್ರಪ್ಪ ಮೊದಲಾದವರು ಭಾಗವಹಿಸುವರು ಎಂದು ತಿಳಿಸಿದರು.

ದಿ. 6. ರಂದು ಮಹಿಳಾ ಕ್ರೀಡಾಕೂಟದಲ್ಲಿ ವಿವಿಧ ಕ್ರೀಡೆಗಳು ನಡೆಯಲಿವೆ. ದಿ. 7 ರಂದು ಸಂಜೆ 6.00 ಗಂಟೆಗೆ ಜಯದೇವ ಕಪ್ ಸಮಾರೋಪ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ ಹಳೆಯ ಮಾಧ್ಯಮಿಕ ಶಾಲಾ ಆವರಣದಲ್ಲಿ ನಡೆಯಲಿದ್ದು, ಶ್ರೀ ಶಿವಬಸವ ಗುರು ಮುರುಘರಾಜೇಂದ್ರ ಸ್ವಾಮಿಗಳು, ಅಥಣಿ ಸಮ್ಮುಖ ವಹಿಸುವರು. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿಜೇತರಿಗೆ ಬಹುಮಾನ ವಿತರಣೆ ಮಾಡುವರು. ಮುಖ್ಯಅತಿಥಿಗಳಾಗಿ ಮಾಜಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಮುರುಳಿಧರ ಹಾಲಪ್ಪ, ಬಳ್ಳಾರಿ ಹನುಮಂತಪ್ಪ,ಡಾ.ವೈ.ರಾಮಪ್ಪ,ಉಮೇಶ ಕಾರಜೋಳ, ಎನ್.ಲೋಕೇಶ್‌ಗೌಡ, ಬಿ. ಜನಾರ್ದನಸ್ವಾಮಿ, ಜಿ.ಎಸ್. ಅನಿತ್, ಮಹಾಲಿಂಗಪ್ಪ ಕುಂಚಿಗನಾಳ್, ಡಾ. ಸಿ.ವಿ.ಹರೀಶ್ ಪಾಲ್ಗೊಳ್ಳುವರು ಎಂದರು.

ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮಿಗಳು ಮಾತನಾಡಿ, ಈ ಕ್ರೀಡಾಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ವಸತಿ ಊಟವನ್ನು ನೀಡಲಾಗುವುದು. ಈಗಾಗಲೇ ಕ್ರೀಡಾಕೂಟದಲ್ಲಿ ಶೇ.90 ರಷ್ಟು ಕಾರ್ಯ ಮುಗಿದೆ, ಉಳಿದ ಶೇ.10 ರಷ್ಟು ಕಾರ್ಯ ಇಂದಿಗೆ ಮುಗಿಯಲಿದೆ. ಇದೊಂದು ಅರ್ಥಪೂರ್ಣವಾದ ಕ್ರೀಡಾಕೂಟವಾಗಿದೆ. ಅ. 5 ರಿಂದ ಪ್ರಾರಂಭವಾಗಿ 7ರವರೆಗೆ ನಡೆಯಲಿದೆ. ಇದರಲ್ಲಿ ಮಹಿಳೆಯರಿಗಾಗಿ ಪ್ರತ್ಯೇಕವಾಗಿ ಕ್ರೀಡೆ ನಡೆಯಲಿದೆ ಎಂದು ತಿಳಿಸಿದರು.

ಕ್ರೀಡಾಕೂಟದ ಉಪಾಧ್ಯಕ್ಷರಾದ ಕೆ.ಸಿ.ನಾಗರಾಜ್ ಮಾತನಾಡಿ, ಈ ಕ್ರೀಡಾಕೂಟದಲ್ಲಿ ವಿವಿಧ ಕ್ರೀಡೆಗಳ ಸುಮಾರು 58 ತಂಡಗಳು ಭಾಗವಹಿಸಲಿವೆ. ಈಗಾಗಲೇ ಕ್ರಿಕೇಟ್ ಪಂದ್ಯಾವಳಿ ಮುಗಿಯಲಿದೆ. ಕ್ರೀಡಾಕೂಟದ ಪ್ರಾರಂಭ ಹಾಗೂ ಮುಕ್ತಾಯ ದಿನದಂದು ಅರ್ಥ ಪೂರ್ಣವಾದ ವರ್ಣ ರಂಜಿತವಾದ ಕಾರ್ಯಕ್ರಮ ನಡೆಯಲಿದೆ. ಇದರಲ್ಲಿ ಜಯದೇವ ಶ್ರೀಗಳ ಜೀವನ ಚರಿತೆಯನ್ನು ಲೇಜರ್ ಮೂಲಕ ನೋಡುಗರಿಗೆ ನೀಡಲಾಗುತ್ತಿದೆ ಎಂದರು.

ಕ್ರೀಡಾಕೂಟದ ಸಮಿತಿಯ ಅಧ್ಯಕ್ಷರಾದ ಶ್ರೀರಾಮ್, ಹನೀಫ್, ಮಂಜುನಾಥ್, ಪ್ರಕಾಶ್ ರಾಮ್ ನಾಯ್ಕ್, ಖುದ್ದಸ್, ವಿರೇಂದ್ರಕುಮಾರ್, ಪೈಲಟ್ ನಾಗರಾಜ್, ಫ್ರಕ್ರುದ್ದಿನ್, ಗೊಪ್ಪೆ ಮಂಜುನಾಥ್, ಷಫಿವುಲ್ಲಾ, ಸೇರಿದಂತೆ ಇತರರು ಭಾಗವಹಿಸಿದ್ದರು.

# ಕಾಂಗ್ರೆಸ್‌ನಿಂದ ರೈತ ಸಮುದಾಯಕ್ಕೆ ಭಾರಿ ಅನ್ಯಾಯ

» **ಚಳ್ಳಕೆರೆ**

ರಾಜ್ಯದರೈತರಿಗೆಕೇಂದ್ರಸರ್ಕಾರದಫಸಲ್‌ಭೀಮಾ ಯೋಜನೆ ವರವಾಗಿ ಪರಿಣಮಿಸಿದೆ. ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ಮುಖ್ಯಮಂತ್ರಿ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಸೇರಿದಂತೆ ಯಾವುದೇ ಸಚಿವರು, ಶಾಸಕರಿಗೆ ರೈತರ ಬಗ್ಗೆ ಕಾಳಜಿ ಇಲ್ಲ. ರಾಜ್ಯದ ರೈತರಿಗೆ ಯಾವುದೇ ಕೊಡುಗೆಯನ್ನು ಸರ್ಕಾರ ನೀಡಿಲ್ಲ, ನಷ್ಟಕ್ಕೊಳಗಾಗಿರುವ ರೈತ ಸಮುದಾಯಕ್ಕೆ ಸರ್ಕಾರ ವಿಶೇಷ ಪ್ಯಾಕೇಜ್ ಯೋಜನೆಯಡಿ ನೆರವು ನೀಡಬೇಕೆಂದು ರಾಜ್ಯ ಬಿಜೆಪಿ ರೈತಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ.ನವೀನ್ ತಿಳಿಸಿದರು.



ಅವರು, ನಗರ ಖಾಸಗಿ ಹೋಟೆಲ್‌ನಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ರಾಜ್ಯವನ್ನಾಳುವ ಸರ್ಕಾರಕ್ಕೆ ರೈತರ ಬಗ್ಗೆ ಯಾವುದೇ ವಿಶ್ವಾಸವಿಲ್ಲ, ಭಾರತೀಯ ಜನತಾ ಪಕ್ಷದ ರೈತಮೋರ್ಚಾ ಘಟಕ ರಾಜ್ಯದೆಲ್ಲೆಡೆ ಪ್ರವಾಸ ನಡೆಸಿ ರೈತ ಸಮುದಾಯಕ್ಕೆ ಸಹಾಯಸ್ತ ನೀಡುವ ಕಾರ್ಯ ಕೈಗೊಂಡಿದೆ. ವಿಶೇಷವಾಗಿ ಚಿತ್ರದುರ್ಗಜಿಲ್ಲೆಯ ಮೊಳಕಾಲ್ಮೂರು, ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕುಗಳ ಶೇಂಗಾ ಹಾಗೂ ಈರುಳ್ಳಿ ಬೆಳೆಗಾರರು ನಷ್ಟದಲ್ಲಿದ್ದು ಸರ್ಕಾರ ಕೂಡಲೇ ವಿಶೇಷ ಪ್ಯಾಕೇಜ್ ಮೂಲಕ ರೈತರನ್ನು ನಷ್ಟದಿಂದ ಪಾರುಮಾಡಬೇಕೆಂದು ಅವರು ಒತ್ತಾಯಿಸಿದರು. ಬಿಜೆಪಿ ರೈತಮೋರ್ಚಾ ಘಟಕ ರಾಜ್ಯದೆಲ್ಲೆಡೆ ಪ್ರವಾಸ ಕೈಗೊಂಡಾಗ ಪ್ರಧಾನಮಂತ್ರಿ ನರೇಂದ್ರಮೋದಿಯವರ ಫಸಲ್‌ಭೀಮಾ ಯೋಜನೆ ರೈತರಿಗೆ ಹೆಚ್ಚು ಶಕ್ತಿ ತುಂಬಿದೆ. ಫಸಲ್‌ಭೀಮಾಯೋಜನೆಜಾರಿಯಿಂದ ರೈತರ ಕಲ್ಯಾಣವಾಗಿದೆ ಎಂಬ ಪ್ರಶಂಸನೀಯ ಮಾತು ಕೇಳಿಬಂದಿವೆ ಎಂದರು.

ಬಿಜೆಪಿ ರೈತ ಘಟಕದ ಜಿಲ್ಲಾಧ್ಯಕ್ಷ ವೆಂಕಟೇಶ್‌ಯಾದವ್ ಮಾತನಾಡಿ, ಚಿತ್ರದುರ್ಗ ಜಿಲ್ಲೆಯಲ್ಲಿ 1.12 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ, ಈರುಳ್ಳಿ ಬಿತ್ತನೆಯಾಗಿತ್ತು. ಬಹುತೇಕ ಎಲ್ಲಾ ಬೆಳಗಳು ನೆಲಕಚ್ಚಿವೆ. ಆದರೆ, ಕೃಷಿ ಇಲಾಖೆ ಅಧಿಕಾರಿಗಳು ಮಾತ್ರ 874 ಹೆಕ್ಟೇರ್ ಪ್ರದೇಶ ಮಾತ್ರ ಬೆಳೆನಾಶವಾಗಿದೆ ಎಂದು ಸರ್ಕಾರಕ್ಕೆ ವರದಿ ನೀಡಿದ್ದಾರೆ. ಕೃಷಿ ಇಲಾಖೆ ಅಧಿಕಾರಿಗಳು ಈ ಬಗ್ಗೆ ಗಂಭೀರಚಿಂತನೆ ನಡೆಸಿ ಸರ್ಕಾರಕ್ಕೆ ವಾಸ್ತವ ವರದಿ ನೀಡಬೇಕೆಂದರು.

## ತಾಲ್ಲೂಕು ಕಚೇರಿ ಕಾಂಪೌಂಡ್‌ಗೆ ಅಂಟಿಕೊಂಡಿದ್ದ ಗೂಡಂಗಡಿ ತೆರವು



» **ಚಳ್ಳಕೆರೆ**

ನಗರದ ಹೃದಯಭಾಗದ ಅಂಬೇಡ್ಕರ್ ವೃತ್ತದ ಬಳಿ ಇರುವ ತಾಲ್ಲೂಕು ಕಚೇರಿಗೆ ಗ್ರಾಮೀಣ ಭಾಗದ ಸಾವಿರಾರು ಜನರು ತಮ್ಮ ಕೆಲಸ ಕಾರ್ಯಗಳಿಗೆ ಆಗಮಿಸುತ್ತಿದ್ದು, ತಾಲೂಕು ಕಚೇರಿಗೆ ಕಾಂಪೌಂಡ್‌ಗೆ ಹೊಂದಿಕೊಂಡಂತೆ ಹತ್ತಾರು ಗೂಡಂಗಡಿಗಳಿದ್ದು ಇದರಿಂದ ಸಾರ್ವಜನಿಕರಿಗೆ ಆಗುತ್ತಿದ್ದ ತೊಂದರೆ ಗಮನಿಸಿ ತಹಶೀಲ್ದಾರ್ ರೇಹಾನ್‌ಪಾಷ, ನಗರಸಭೆ, ಪೊಲೀಸ್ ಇಲಾಖೆ ಸಹಕಾರದೊಂದಿಗೆ ದಿಢೀರ್ ಕಾರ್ಯಚರಣೆ ನಡೆಸಿ ಗೂಡಂಗಡಿಗಳ ತೆರವು ಗೊಳಿಸಿದರು. ಗುರುವಾರ ಮಧ್ಯಾಹ್ನ ನಗರಸಭೆ, ಪೊಲೀಸ್, ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಗೂಡಂಗಡಿಗಳ ಮಾಲೀಕರಿಗೆ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯ ಬಗ್ಗೆ ಮಾಹಿತಿ ನೀಡಿ ಅಂಗಡಿಗಳನ್ನು ತೆರವುಗೊಳಿಸಿದರು.

**ಪ್ರಮುಖ ಸುದ್ದಿ**

### 2027 ಕ್ಕೆ ಜನವರಿಯೊಳಗೆ ರೈಲು ಸಂಚಾರಕ್ಕೆ ಕ್ರಮ; ರೈಲ್ವೆ ರಾಜ್ಯ ಸಚಿವರಾದ ವಿ.ಸೋಮಣ್ಣ

# ನೇರ ರೈಲು: ಇದೇ ಆರ್ಥಿಕ ವರ್ಷದಲ್ಲಿ ಕಾಮಗಾರಿ ಶುರು

» **ದಾವಣಗೆರೆ**

ತುಮಕೂರು-ಚಿತ್ರದುರ್ಗ-ದಾವಣಗೆರೆ ನೇರ ರೈಲು ಮಾರ್ಗದ ಭೂ ಸ್ವಾಧೀನ ಪ್ರಕ್ರಿಯೆ ಮುಗಿಯುವ ಹಂತದಲ್ಲಿದ್ದು ಮುಂದಿನ ನಾಲ್ಕೈದು ತಿಂಗಳು ಇದೇ ಆರ್ಥಿಕ ವರ್ಷಾಂತ್ಯದಲ್ಲಿ ಹಲವು ಕಡೆ ಕಾಮಗಾರಿ ಪ್ರಾರಂಭಿಸಲಾಗುತ್ತದೆ ಎಂದು ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ತಿಳಿಸಿದರು.



ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ರೈಲ್ವೆ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆ ನಂತರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ನೇರ ರೈಲು ಮಾರ್ಗವು ನಿಧಾನಗತಿಯಲ್ಲಿ ಸಾಗುತ್ತಿದ್ದು ಕಳೆದ ಎರಡೂವರೆಗೆ ತಿಂಗಳಿಂದ ಇದರ ಪ್ರಗತಿ ವೇಗ ಹೆಚ್ಚಿಸಲಾಗಿದೆ. ಒಟ್ಟು ಈ ಯೋಜನೆಗೆ 2406.73 ಎಕರೆ ಭೂಮಿ ಬೇಕಾಗಿದ್ದು ಈಗಾಗಲೇ 2119.16 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದೆ. 287.54 ಎಕರೆ ಸ್ವಾಧೀನ ಮಾಡಿಕೊಳ್ಳಬೇಕಾಗಿದ್ದು ದಾವಣಗೆರೆ ಜಿಲ್ಲೆಯಲ್ಲಿ ಹಾದುಹೋಗುವ 263.78 ಎಕರೆ ಜಮೀನಿನಲ್ಲಿ 246.20 ಎಕರೆ ಸ್ವಾಧೀನ ಪಡಿಸಿಕೊಂಡಿದ್ದು 17.58 ಎಕರೆಯ ಸ್ವಾಧೀನ ಪ್ರಕ್ರಿಯೆ ವಿವಿಧ ಹಂತದಲ್ಲಿದ್ದು ಕೆಲವೇ ದಿನಗಳಲ್ಲಿ ಪೂರ್ಣವಾಗಲಿದೆ ಎಂದರು.

ತುಮಕೂರು-ಚಿತ್ರದುರ್ಗ-ದಾವಣಗೆರೆ ನೇರ ರೈಲು ಯೋಜನೆಯನ್ನು ಕಾಲಮಿತಿಯಲ್ಲಿ ಮುಕ್ತಾಯಗೊಳಿಸುವ ಗುರಿ ಹೊಂದಲಾಗಿದ್ದು 2027 ರ ಜನವರಿಯೊಳಗಾಗಿ ಪೂರ್ಣಗೊಳಿಸಿ ಉದ್ಘಾಟನೆ ಮಾಡಲು ಉದ್ದೇಶಿಸಲಾಗಿದೆ. ರೈಲ್ವೆ ಕಾಮಗಾರಿಯನ್ನು ಸಂಪೂರ್ಣವಾಗಿ ಕೇಂದ್ರ ಸರ್ಕಾರದಿಂದ ಅಭಿವೃದ್ಧಿ ಮಾಡಲಾಗುತ್ತದೆ. ಇದೇ ಆರ್ಥಿಕ ವರ್ಷದ ಕೊನೆಯಾಗುವ ವೇಳೆಗೆ ಕನಿಷ್ಠ 4 ರಿಂದ 5 ಕಡೆ ಕಾಮಗಾರಿ ಪ್ರಾರಂಭಿಸಲಾಗುತ್ತದೆ ಎಂದರು.

ರಾಜ್ಯದಲ್ಲಿ ಒಟ್ಟು 21 ರೈಲ್ವೆಯೋಜನೆಗಳು ನಡೆಯುತ್ತಿದ್ದು ಇದಕ್ಕಾಗಿ 43 ಸಾವಿರ ಕೋಟಿ ವೆಚ್ಚ ಮಾಡಲಾಗುತ್ತದೆ. ಈ ಎಲ್ಲಾ ಯೋಜನೆಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ ರಾಜ್ಯವನ್ನು ರೈಲ್ವೆ ಸೌಕರ್ಯ ಹೊಂದಿದ ರಾಜ್ಯವನ್ನಾಗಿ ಮಾಡುವ ಗುರಿ ಹೊಂದಲಾಗಿದೆ. ಶಿವಮೊಗ್ಗ-ಶಿಕಾರಿಪುರ-ರಾಣೆಬೆನ್ನೂರು ಹೊಸ ರೈಲ್ವೆ ಯೋಜನೆಗೆ ಈಗಾಗಲೇ ದಾವಣಗೆರೆ ಜಿಲ್ಲಾ ವ್ಯಾಪ್ತಿಯಲ್ಲಿ 115.11.08 ಎಕರೆ ಜಮೀನು ಸ್ವಾಧೀನ ಮಾಡಲಾಗಿದೆ ಎಂದರು.

ರೈಲ್ವೆ ಮೇಲ್ಸೇತುವೆ, ಕೆಳಸೇತುವೆ ನಿರ್ಮಾಣ; ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿರುವ ಕಡೆ ರೈಲ್ವೆ ಇಲಾಖೆಯಿಂದಲೇ ಮೇಲ್ಸೇತುವೆ ಹಾಗೂ ಕೆಳಸೇತುವೆಗಳನ್ನು ನಿರ್ಮಾಣ ಮಾಡಲಾಗುತ್ತದೆ. ದಾವಣಗೆರೆ ನಗರದ ಅಶೋಕ ಟಾಕೀಸ್ ಹತ್ತಿರ ರೈಲ್ವೆ ಲೈನ್ ಕೆಳಸೇತುವೆಗೆ ಸಂಪರ್ಕ ರಸ್ತೆ ನಿರ್ಮಾಣದ ಭೂ ನೇರ ಖರೀದಿಗೆ ರೂ.23.09 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದ್ದು ಆದಷ್ಟು ಬೇಗ ಈ ಕಾಮಗಾರಿ ಮಾಡಲು ಅನುವು ಮಾಡಿಕೊಡಲಾಗುತ್ತದೆ ಎಂದರು. ರೈಲ್ವೆ ವೇಗ ಹೆಚ್ಚಿಸಲು ಕ್ರಮ; ರೈಲ್ವೆ ಇಂಜಿನ್‌ಗಳು ಬಹುತೇಕ ಶೇ 98 ರಷ್ಟು ವಿದ್ಯುತ್ ಚಾಲಿತವಾಗಿದ್ದು ಶೇ 2 ರಷ್ಟು ಮಾತ್ರ ಡೀಸೆಲ್ ಇಂಜಿನ್‌ಗಳಿವೆ. ರೈಲ್ವೆ ಪ್ರಯಾಣದ ವೇಗ ಪ್ರಸ್ತುತ 110 ಕಿ.ಮೀ ಇದ್ದು ಇದನ್ನು 135 ಕಿ.ಮೀ ವರೆಗೆ ವೇಗ ಹೆಚ್ಚಿಸುವ ಗುರಿಯೊಂದಿಗೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಮಾಡಲಾಗುತ್ತಿದೆ. ವಂದೇ ಭಾರತ್ ರೈಲು ಬಡುವರು, ಮಧ್ಯಮ ವರ್ಗದವರಿಗೆ ತುರ್ತು ಪ್ರಯಾಣಕ್ಕಾಗಿ ಕೈಗೆಟಕುವ ದರದಲ್ಲಿ ಟಿಕೆಟ್ ಇದ್ದು ಇದರಲ್ಲಿ ನೀಡಲಾಗಿರುವ ಸೌಲಭ್ಯಗಳ ಬಗ್ಗೆ ಅರಿಯಲು ಪ್ರಯಾಣಿಸಬೇಕೆಂದರು.

ಕನ್ನಡದಲ್ಲೆ ರೈಲ್ವೆ ಪರೀಕ್ಷೆ; ರೈಲ್ವೆ ಇಲಾಖೆಯಲ್ಲಿ ಒಟ್ಟು 12 ಲಕ್ಷ ಹುದ್ದೆಗಳಿದ್ದು 15 ಲಕ್ಷ ಜನರು ಪಿಂಚಣಿ ಪಡೆಯುತ್ತಿದ್ದಾರೆ. ಖಾಲಿ ಇರುವ 16 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲು ಅಧಿಸೂಚನೆ ಹೊರಡಿಸಲಾಗಿದೆ. ಈ ಪರೀಕ್ಷೆಯನ್ನು ಕನ್ನಡದಲ್ಲಿಯೇ ಬರೆಯಲು ಆದೇಶ ನೀಡಲಾಗಿದ್ದು ನಮ್ಮ ರಾಜ್ಯದ ಯುವಕರು ಇದರ ಉಪಯೋಗ ಪಡೆದುಕೊಳ್ಳಬೇಕು, ಮುಂದಿನ ದಿನಗಳಲ್ಲಿ ಖಾಲಿ ಇರುವ 46 ಸಾವಿರ ಹುದ್ದೆಗಳ ಭರ್ತಿ ಮಾಡಲಾಗುತ್ತದೆ ಎಂದರು.

ದಾವಣಗೆರೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಸಭೆಯಲ್ಲಿ ಮಾತನಾಡಿ ದಾವಣಗೆರೆ ನಗರದಲ್ಲಿನ ಮೀನು ಮಾರುಕಟ್ಟೆ ಬಳಿ ರೈಲ್ವೆ ಮೇಲ್ಸೇತುವೆ ಅಥವಾ ಕೆಳಸೇತುವೆ ಅಗತ್ಯವಾಗಿದೆ. ಅಶೋಕ ಟಾಕೀಸ್ ಹತ್ತಿರ ರಸ್ತೆ ಕಿರಿದಾಗಿದ್ದು ಸಂಪರ್ಕ ರಸ್ತೆ ನಿರ್ಮಾಣ ಮಾಡಬೇಕು, ಲಿಂಗೇಶ್ವರ ದೇವಸ್ಥಾನದ ಹತ್ತಿರ ಪಾದಚಾರಿ ಮಾರ್ಗ ನಿರ್ಮಿಸಲು, ಶಿವಮೊಗ್ಗ-ಶಿಕಾರಿಪುರ-ರಾಣೆಬೆನ್ನೂರು ಹೊಸ ಮಾರ್ಗದಲ್ಲಿ ಸೂರಗೊಂಡನಕೊಪ್ಪ ಅಥವಾ ನ್ಯಾಮತಿಯಲ್ಲಿ ರೈಲ್ವೆ ನಿಲ್ದಾಣಕ್ಕೆ ಅವಕಾಶ ಮಾಡಲು, ಹರಿಹರದಲ್ಲಿನ ರೈಲ್ವೆ ಆಸ್ಪತ್ರೆ, ಸ್ಕೂಲ್ ಮೇಲ್ದರ್ಜೆಗೇರಿಸಲು ರೈಲ್ವೆ ಸಚಿವರಲ್ಲಿ ಮನವಿ ಮಾಡಿದರು.

ಹರಿಹರ ಶಾಸಕರಾದ ಬಿ.ಪಿ.ಹರೀಶ್ ಹೊಸಪೇಟೆ ಹೋಗುವ ಹೆದ್ದಾರಿಯಲ್ಲಿ ಒಂದೇ ರೈಲ್ವೆ ಸೇತುವೆ ಇದ್ದು ಮತ್ತೊಂದು ಬ್ರಿಡ್ಜ್ ನಿರ್ಮಾಣ ಮಾಡಬೇಕು, ಮಳೆ ಬಂದಾಗ ಈ ಮಾರ್ಗದ ವಾಹನಗಳಿಗೆ ತೊಂದರೆಯಾಗುವುದರಿಂದ ರೈಲ್ವೆ ಸೇತುವೆಯ ಅವಶ್ಯಕತೆ ಇದೆ ಎಂದರು.

ಸಭೆಯಲ್ಲಿ ಮೇಯರ್ ಚಮನ್ ಸಾಬ್, ದೂಡಾ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಜಿಲ್ಲಾ ರಕ್ಷಣಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ರೈಲ್ವೆ ಹಿರಿಯ ಅಧಿಕಾರಿ ಶರ್ಮಾ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T